# ಜನಶ್ರೀ ಟೈಮ್ಸ್

ಕನ್ನಡ ದಿನಪತ್ರಿಕೆ

JANASHREE TIMES KANNADA DAILY NEWS PAPER

PRGI NO : KNKAN/26/A0482



ಜನಶ್ರೀವಾಣಿ

ಬಂಗಾರದ ಶೃಂಗಾರ ಮಾಡಿಕೊಂಡು ಹೆಂಗಾರ ಬದುಕೋದಕ್ಕಿಂತ, ಬಂಗಾರದಂತ ಗುಣವುಳ್ಳವರಾಗಿ ಬಾಳುವುದು ಬಹಳ ಲೇಸು..!

■ ಆನಂದಯ್ಯ ವಿರಕ್ತಮಠ
ಸಂಪಾದಕರು: ಜನಶ್ರೀ ಟೈಮ್ಸ್



ಸಂಪಾದಕರು: ಆನಂದಯ್ಯ ವಿರಕ್ತಮಠ | ಸಂಪುಟ: 01 ಸಂಚಿಕೆ: 40 ಪುಟಗಳು: 04 ಬೆಲೆ: 02 ರೂ. ದಿನಾಂಕ: 01-07-2026 ಶನಿವಾರ | 73536 56555


## ದೇಶದ ಅಭಿವೃದ್ಧಿಗೆ ಮಹಿಳೆಯರ ಪಾತ್ರ ಮಹತ್ವದ್ದು ಮಹಿಳೆಯರು ಅನ್ಯಾಯ, ದೌರ್ಜನ್ಯ ವಿರುದ್ಧ ಧ್ವನಿ ಎತ್ತಲಿ : ಡಾ.ನಾಗಲಕ್ಷ್ಮಿ ಚೌಧರಿ



ಗದಗ: ದೇಶದ ಅಭಿವೃದ್ಧಿಯಲ್ಲಿ ಮಹಿಳೆಯರ ಪಾತ್ರ ಮುಖ್ಯವಾಗಿದೆ. ಮಹಿಳೆಯರು ಅನ್ಯಾಯ ಮತ್ತು ದೌರ್ಜನ್ಯದ ವಿರುದ್ಧ ಧ್ವನಿ ಎತ್ತಬೇಕು. ಜಿಲ್ಲೆಯ ಮಹಿಳೆಯರು ದೌರ್ಜನ್ಯ ರಹಿತರಾಗಿರಬೇಕು ಎಂದು ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಶುಕ್ರವಾರ ಕರ್ನಾಟಕ ರಾಜ್ಯ ಮಹಿಳಾ ಆಯೋಗ ಬೆಂಗಳೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಗದಗ ಜಿಲ್ಲೆ ಇವರ ಸಹಯೋಗದೊಂದಿಗೆ ಸ್ಥಳೀಯ ಹಾಗೂ ಆಂತರಿಕ ದೂರು ನಿವಾರಣಾ ಸಮಿತಿ ಸದಸ್ಯರಿಗೆ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ–2013 ಕುರಿತು ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಹೆಣ್ಣು ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು ಆರ್ಥಿಕವಾಗಿ ಸ್ವಾವಲಂಬಿಯಾಗಬೇಕು. ಮಹಿಳೆಯರ ಯಶಸ್ವಿಯಾಗಿ ಸಮಾಜದ ಮುಖ್ಯವಾಹಿನಿಗೆ ಬರಲು ಪುರುಷರ ಸಹಕಾರವೂ ಅಗತ್ಯವಾಗಿ–ತ್ತದೆ. ಮಹಿಳೆಯರು ತಮಗಾದ ದೌರ್ಜನ್ಯವನ್ನು ಸಹಿಸಿಕೊಳ್ಳಬಾರದು. POST ACT ಗಿಂತ ಮೊದಲೇ ಸಾಕಷ್ಟು ಕಾನೂನು ಮಹಿಳಾ ಸಬಲೀಕರಣಕ್ಕಾಗಿ ಜಾರಿಗೊಂಡಿವೆ. ಹೆಣ್ಣುಮಕ್ಕಳಿಗೆ ಕೆಲಸದ ಸ್ಥಳದಲ್ಲಿ ಲೈಂಗಿಕ ದೌರ್ಜನ್ಯವಾಗುತ್ತಿದ್ದರೆ POST ACT ನಡಿ ರಚಿತವಾಗಿರುವ ಸಮಿತಿಗೆ ದೂರು ಕೊಟ್ಟು ಪರಿಹಾರ ಕಂಡುಕೊಳ್ಳಬಹುದು. POSTACT ಅಧಿನಿಯಮ ಜಾರಿಯಾದ ಬಗೆಯನ್ನು ವಿವರಿಸಿದ ಅವರು ಕಾಯ್ದೆಯ ದುರ್ಬಳಕೆಯಾಗಬಾರದು ಎಂದು ತಿಳಿಸಿದರು.

ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ ಮಾತನಾಡಿ, ಕಾನೂನು ಸೇವಾ ಪ್ರಾಧಿಕಾರದಿಂದ ವಿವಿಧ ಇಲಾಖೆಯ ಸಹಯೋಗದೊಂದಿಗೆ POSH ACT ನ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಮಾಡಲಾಗುತ್ತಿದೆ. ಕಔಖಊ ನ ಉದ್ದೇಶವನ್ನು ಎಲ್ಲರೂ ತಿಳಿದುಕೊಳ್ಳಬೇಕು. ಕೆಲಸದ ಸ್ಥಳದಲ್ಲಿ ಮಹಿಳೆಯರಿಗೆ ತೊಂದರೆಯಾದರೆ ಅಲ್ಲಿಯೇ ಇರುವ ಕಮೀಟಿಗೆ ದೂರು ಕೊಡಬಹುದು. ಸಿವಿಲ್ ಕೋರ್ಟಗೆ ಇರುವ ಅಧಿಕಾರವೇ ಆ ಕಮೀಟಿಗೂ ಇರುತ್ತದೆ. ಈ ಕಾಯ್ದೆಯು ಸರ್ಕಾರಿ ಕ್ಷೇತ್ರವಲ್ಲದೇ ಖಾಸಗಿ, ಸಂಘ ಸಂಸ್ಥೆಗಳಲ್ಲಿ ಕೆಲಸ ಮಾಡುವ ಮಹಿಳೆಯರಿಗೂ ಸಂಬಂಧಿಸಿದ್ದಾಗಿರುತ್ತದೆ. ಕಾಯ್ದೆಯ ಸದ್ಬಳಕೆಯಾಗಬಾರದು. ಒಂದು ವೇಳೆ ಕಾಯ್ದೆಯ ಉದ್ದೇಶಪೂರ್ವಕವಾದ ದುರ್ಬಳಕೆಯಾದರೆ ದೂರುದಾರರಿಗೂ ಶಿಕ್ಷೆಯಾಗುತ್ತದೆ ಎಂದು ತಿಳಿಸಿದರು. ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಮಾತನಾಡಿ, ಮಹಿಳೆಯರ ಸಬಲೀಕರಣಕ್ಕಾಗಿ ಪೋಸ್ ಗಿಂತ ಮೊದಲೇ ಸಾಕಷ್ಟು ಕಾನೂನು ಬಂದಿವೆ. ಕೆಲಸದ ಸ್ಥಳದಲ್ಲಿ ಮಹಿಳೆಯರಿಗೆ ಲೈಂಗಿಕ ದೌರ್ಜನ್ಯ ತಡೆಗಟ್ಟುವಿಕೆಗಾಗಿ, ಮಾನವೀಯತೆ ಇಲ್ಲದೇ ಮಹಿಳಯರ ಮೇಲೆ ದಬ್ಬಾಳಿಕೆಯಾದಾಗ ಅಂತಹ ದೌರ್ಜನ್ಯವನ್ನು ಸಹಿಸಿಕೊಳ್ಳಬಾರದು. ಅನ್ಯಾಯ ಮತ್ತು ದೌರ್ಜನ್ಯವನ್ನು ಸಂಬವಿಸಿದಾಗ ಮೂಕವಿಸ್ಮಿತರಾಗಿ ಇದ್ದು ಸಹಿಸಿಕೊಳ್ಳುವುದು ಸಹ ತಪ್ಪು. ದೌರ್ಜನ್ಯದ ವಿರುದ್ಧ ಹೋರಾಡುವ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ತಿಳಿಸಿದರು. ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಟಿ.ಎಸ್. ಚಂದ್ರಿಕಾ ಅವರು ಸ್ಥಳೀಯ ಹಾಗೂ ಆಂತರಿಕ ದೂರು ನಿವಾರಣಾ ಸಮಿತಿ ಸದಸ್ಯರಿಗೆ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯ ತಡೆ ಕಾಯ್ದೆ –2013 ರ ಕುರಿತು ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಅಪರ ಜಿಲ್ಲಾಧಿಕಾರಿ ಡಾ.ದುರಗೇಶ್ ಕೆ.ಆರ್, ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಕಾರ್ಯದರ್ಶಿ ರೂಪಾ , ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ರಾಧಾ ಮಣ್ಣೂರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಆರ್, ಸೇರಿದಂತೆ ಸಂಘ ಸಂಸ್ಥೆಯವರು, ವಿವಿಧ ಇಲಾಖೆ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.

## ಪತ್ರಿಕಾ ದಿನಾಚರಣೆ : ಹಿರಿಯ ಪತ್ರಕರ್ತರ ಸನ್ಮಾನ ಪತ್ರಕರ್ತರು ಸ್ವಯಂ ಆತ್ಮಾವಲೋಕನ ಮಾಡಿಕೊಳ್ಳಿ : ಡಿ.ಬಿ.ವಡವಡಗಿ




ಜನಶ್ರೀ ಟೈಮ್ಸ್ ಸುದ್ದಿ

ಮುದ್ದೇಬಿಹಾಳ: ನೈಜ ಪತ್ರಕರ್ತರು ಮುಜುಗರ ಪಡುವಂಥ ವಾತಾವರಣ ಇಂದು ನಿರ್ಮಾಣಗೊಂಡಿದೆ.ಪತ್ರಿಕೋದ್ಯಮವನ್ನೇ ಉದ್ಯೋಗ ಮಾಡಿಕೊಳ್ಳದೆ ಇದನ್ನು ಹವ್ಯಾಸ ಎಂದು ಭಾವಿಸಿ ಮೂಲ ವೃತ್ತಿಯ ಜೊತೆಗೆ ಇದನ್ನು ಉಪವೃತ್ತಿಯನ್ನಾಗಿ ಮಾಡಿಕೊಂಡರೆ ಮಾತ್ರ ಈ ಕ್ಷೇತ್ರದಲ್ಲಿ ಗೌರವ ಗಳಿಸುವುದು ಸಾಧ್ಯವಿದೆ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ತಾಲೂಕು ಅಧ್ಯಕ್ಷ ಡಿ.ಬಿ.ವಡವಡಗಿ ಹೇಳಿದರು.

ಇಲ್ಲಿನ ಪ್ರವಾಸಿ ಮಂದಿರದಲ್ಲಿ ಶುಕ್ರವಾರ ಏರ್ಪಡಿಸಿದ್ದ ಪತ್ರಿಕಾ ದಿನಾಚರಣೆ, ಹಿರಿಯ ಪತ್ರಕರ್ತರಿಗೆ ಸನ್ಮಾನ ಹಾಗೂ ಜಿಲ್ಲಾ ಘಟಕ ಒದಗಿಸಿದ ಬ್ಯಾಗುಗಳ ವಿತರಣಾ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಪತ್ರಿಕೋದ್ಯಮವನ್ನು ಹೊಟ್ಟೆಪಾಡಿನ ಉದ್ಯೋಗದಂತೆ ಬಳಸಿಕೊಳ್ಳುತ್ತಿರುವುದು ವಿಷಾಧ ಪಡುವಂಥದ್ದಾಗಿದೆ.ಇಂದು ಪತ್ರಕರ್ತರು ಆತ್ಮವಿಮರ್ಶೆ ಮಾಡಿಕೊಳ್ಳಬೇಕಿದೆ ಎಂದರು. ಸಂಘದ ಪ್ರಧಾನ ಕಾರ್ಯದರ್ಶಿ ಎಚ್.ಆರ್.ಬಾಗವಾನ ಮಾತನಾಡಿ, ಕನ್ನಡದ ಮೊದಲ ಪತ್ರಿಕೆ ಮಂಗಳೂರು ಸಮಾಚಾರ ಪ್ರಾರಂಭದಿಂದ ಹಿಡಿದು ಇಂದಿನ ಆಧುನಿಕ ಪತ್ರಿಕೋದ್ಯಮದ ಒಳ ಹರಿವು, ಆಗು ಹೋಗುಗಳ ಕು–ರಿತು ವಿಷಯ ಮಂಡಿಸಿ ಹರ್ಮನ್ ಮೋಗ್ಲಿಂಗ್, ಮಹಾತ್ಮಾ ಗಾಂಧೀಜಿ, ಡಾ|ಬಿ.ಆರ್.ಅಂಬೇಡ್ಕರ್, ಫ.ಗು.ಹಳಕಟ್ಟಿ, ಪಿ.ಲಂಕೇಶ್ ಸೇರಿದಂತೆ ಹಲವು ಶ್ರೇಷ್ಠ ಪತ್ರಕರ್ತರನ್ನು ಸ್ಮರಿಸಿಕೊಂಡು ಅವರ ಮನೋಭಾವ ಇಂದಿನ ಯುವ ಪತ್ರಕರ್ತರಿಗೆ ಬರಬೇಕು ಎಂದರು. ಪತ್ರಕರ್ತ ರವೀಂದ್ರ ನಂದೆಪ್ಪನವರ ಮಾತನಾಡಿದರು.ಹಿರಿಯ ಪತ್ರಕರ್ತ, ಸಂಘದ ಮಾಜಿ ಅಧ್ಯಕ್ಷ ಅಮೀನಸಾ ಎಲ್.ಮುಲ್ಲಾ ಅವರನ್ನು ಸಂಘದ ವತಿಯಿಂದ ಸನ್ಮಾನಿಸಲಾಯಿತು. ಜಿಲ್ಲಾ ಘಟಕವು ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ರೂಪದಲ್ಲಿ ಉಚಿತವಾಗಿ ನೀಡಿದ ಬ್ಯಾಗುಗಳನ್ನು ವಿತರಿಸಲಾಯಿತು. ಸಂಘದ ಉಪಾಧ್ಯಕ್ಷರಾದ ಬಸವರಾಜ ಹುಲಗಣ್ಣಿ, ಮುತ್ತು ಬೀರಗೊಂಡ(ಢವಳಗಿ), ಖಜಾಂಚಿ ಲಾಡ್ಲೆಮಶ್ಯಾಕ ನದಾಫ (ಶೇಖ್), ಕಾರ್ಯದರ್ಶಿ ಕಾಶಿನಾಥ ಬಿರಾದಾರ, ಸದಸ್ಯರಾದ ಮುತ್ತು ವಡವಡಗಿ, ಸಿದ್ದು ಚಲವಾದಿ, ಬಸವರಾಜ ಕುಂಬಾರ, ಮಹೆಬೂಬ ಹಳ್ಳೂರ, ಮಹಾಂತೇಶ ನೂಲಿನವರ್, ಸಾಗರ ಉಕ್ಕಲಿ, ರಾಜಶೇಖರ ಸಜ್ಜನ, ಈಶ್ವರ ಈಳಗೇರ, ನೂರೇನಬಿ ನದಾಫ, ಸೂರಜ್ ರಿಸಾಲ್ದಾರ್, ಗುರುರಾಜ ಬಡಿಗೇರ, ಬಿ.ಎಸ್.ಪಾಟೀಲ, ಮುನೀರ್ ಅವಟಿಗೇರ, ನಾಗೇಂದ್ರ ಶಿವಸಿಂಪಿ, ರಫೀಕ ಬೀಳಗಿ, ಸದ್ದಾಂ ನದಾಫ, ವಿಕ್ರಮ್ ಬಿರಾದಾರ ಇದ್ದರು. ಇದಕ್ಕೂ ಮುನ್ನ ಪತ್ರಿಕೋದ್ಯಮದ ಪಿತಾಮಹ ಹರ್ಮನ್ ಮೋಗ್ಲಿಂಗ್, ಮಹಾತ್ಮಾ ಗಾಂಧೀಜಿ, ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು.

## ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಗದಗ ಪ್ರವಾಸ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಅಗಸ್ಟ 6 ಮತ್ತು 7 ರಂದು ಗದಗ ಜಿಲ್ಲೆಗೆ ದೂರು ವಿಚಾರಣೆ ಮತ್ತು ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ಪ್ರವಾಸ ಕೈಗೊಳ್ಳಲಿದ್ದು ವಿವರ ಈ ಕೆಳಗಿನಂತಿದೆ.

ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಅವರು ಅಗಸ್ಟ 6 ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋ–ರಿಯಂ ಹಾಲ್‌ದಲ್ಲಿ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಹಾಗೂ ಮಧ್ಯಾಹ್ನ 2.30 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಈಗಾಗಲೇ ಕರ್ನಾಟಕ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾಗಿರುವ ದೂರಿಗೆ ಸಂಬಂಧಪಟ್ಟಂತೆ ದೂರು ವಿಚಾರಣೆ ಮತ್ತು ಪ್ರಕರಣಗಳ ವಿಲೇವಾರಿಗೆ ಸಂಬಂಧಿಸಿದಂತೆ ಸಭೆಯನ್ನು ಹಮ್ಮಿಕೊಂಡಿದ್ದು ಇರುತ್ತದೆ. ಅಗಸ್ಟ್ 7 ರಂದು ವಿವಿಧ ಸರ್ಕಾರಿ ಕಚೇರಿಗಳಿಗೆ ಅನಿರೀಕ್ಷಿತ ಭೇಟಿ ನೀಡಿ ಪರಿಶೀಲನೆಯನ್ನು/ ವಿಚಾರಣೆಯನ್ನು ಕೈಗೊಳ್ಳಲಿರುವರು. ಅಗಸ್ಟ 6 ಮತ್ತು 7 ರಂದು ಉಪಲೋಕಾಯುಕ್ತರು ಸಾರ್ವಜನಿಕರಿಂದ ಯಾವುದೇ ಹೊಸ ದೂರುಗಳನ್ನು ಸ್ವೀಕರಿಸುವುದಿಲ್ಲ ಎಂದು ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಉಪಾಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗದಗ ವಿಧಾನಸಭಾ ಮತಕ್ಷೇತ್ರದ ಎಸ್.ಐ.ಆರ್ ವರದಿ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಜಿಲ್ಲೆಯ ಗದಗ ವಿಧಾನಸಭಾ ಮತಕ್ಷೇತ್ರದ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್)ಪ್ರಕ್ರಿಯೆಯು ಈಗಾಗಲೇ ಪ್ರಾರಂಭವಾಗಿದ್ದು ಬಿ.ಎಲ್.ಓಗಳು ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮಗಳನ್ನು ಮತದಾರರಿಗೆ ವಿತ–ರಿಸುತ್ತಿದ್ದಾರೆ.

ಗದಗ ವಿಧಾನಸಭಾ ಮತಕ್ಷೇತ್ರದಲ್ಲಿ ಒಟ್ಟು 2,33,829 ಮತದಾರರು ಮತದಾರರ ಪಟ್ಟಿಯಲ್ಲಿದ್ದಾರೆ. 226 ಮತಗಟ್ಟೆಗಳಿವೆ. ಬಿ.ಎಲ್.ಓಗಳು ಅಗಸ್ಟ 08 ರವರೆಗೆ ಮನೆ ಮನೆಗೆ ಭೇಟಿ ನೀಡಿ ಎನ್ಯುಮರೇಷನ್ ಫಾರ್ಮ ವಿತರಿಸಲಿದ್ದಾರೆ. ಜುಲೈ 30 ರವರೆಗೆ 2,33,829 ಎನ್ಯುಮರೇಷನ್ ಫಾರ್ಮಗಳನ್ನು ವಿತರಿಸಲಾಗಿದೆ. 1,95,791 ಎನ್ಯುಮರೇಷನ್ ಫಾರ್ಮ ಡಿಜಟಲೀಕರಣಗೊಂಡಿವೆ ಎಂದು ಗದಗ ವಿಧಾನ ಸಭಾ ಮತಕ್ಷೇತ್ರದ ಮತದಾರರ ನೊಂದಣಾಧಿಕಾರಿಗಳಾದ ಗದಗ ಉಪವಿಭಾಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದೆ.


ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.


## ಸಾಮಾಜಿಕ, ಆರ್ಥಿಕ, ಪರಿಸರಾತ್ಮಕ ಕ್ಷೇತ್ರಗಳಲ್ಲಿ ಐತಿಹಾಸಿಕ ಪ್ರಗತಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ

ಜನಶ್ರೀ ಟೈಮ್ಸ್ ಸುದ್ದಿ



ಗದಗ: ಭಾರತವು ಸುಸ್ಥಿರ ಅಭಿವೃದ್ಧಿಗೆ ನೀಡಿರುವ ಕೊಡುಗೆಗಳು ವಿಶ್ವ ಮಟ್ಟದಲ್ಲಿ ಗಮನಾರ್ಹವಾಗಿವೆ. ಭಾರತದ ಸುಸ್ಥಿರ ಅಭಿವೃದ್ಧಿ ಕೊಡುಗೆಗಳಿಂದ 248 ಮಿಲಿಯನ್ ಜನರು ಬಹುಮಟ್ಟದ ಬಡತನದಿಂದ ಹೊರಬಂದಿದ್ದಾರೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ ತಿಳಿಸಿದರು.

ಗದಗ ಜಿಲ್ಲಾ ತರಬೇತಿ ಸಂಸ್ಥೆಯಲ್ಲಿ ಜಿಲ್ಲೆಯ ಸರ್ಕಾರಿ ಸಿ ವೃಂದದ ನೌಕರರು ಮತ್ತು ಅಧಿಕಾರಿಗಳಿಗೆ ಎರಡು ದಿನಗಳ ಸುಸ್ಥಿರ ಅಭಿವೃದ್ಧಿ ಗುರಿಗಳ ಕುರಿತು ಪರಿಚಯಾತ್ಮಕ ತರಬೇತಿ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಹಿಂದುಳಿದ ಪ್ರದೇಶಗಳಲ್ಲಿ ಅಭಿವೃದ್ಧಿ ವೇಗವರ್ಧನೆ. ಆಹಾರ ಭದ್ರತೆ, ಮೂಲಕ ಲಕ್ಷಾಂತರ ಜನರಿಗೆ ಉಚಿತ ಧಾನ್ಯ ವಿತರಣೆ. ಪೋಷಣಾ ಅಭಿಯಾನ ಮೂಲಕ ಮಕ್ಕಳ ಮತ್ತು ತಾಯಂದಿರ ಪೋಷಣಾ ಸುಧಾರಣೆ. ಆರೋಗ್ಯ ಮತ್ತು ಪೋಷಣೆ ಯೋಜನೆ ಮೂಲಕ ಲಕ್ಷಾಂತರ ಕುಟುಂಬಗಳಿಗೆ ಉಚಿತ ಆರೋಗ್ಯ ವಿಮೆ. ಮಾತೃ–ಶಿಶು ಆರೋಗ್ಯ ಕಾರ್ಯಕ್ರಮಗಳು ಗ್ರಾಮೀಣ ಪ್ರದೇಶಗಳಲ್ಲಿ ಆರೋಗ್ಯ ಸೇವೆಗಳನ್ನು ವಿಸ್ತರಿಸುತ್ತಿವೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಪ್ರಾಚಾರ್ಯ ಜಯದೇವಿ ಅಡಕೇರಿಮಠ ಅವರು, ಭಾರತವು ಸುಸ್ಥಿರ ಗುರಿಗಳ ಮೂಲಕ ಸಾಮಾಜಿಕ, ಆರ್ಥಿಕ ಹಾಗೂ ಪರಿಸರಾತ್ಮಕ ಕ್ಷೇತ್ರಗಳಲ್ಲಿ ಐತಿಹಾಸಿಕ ಪ್ರಗತಿಯನ್ನು ಸಾಧಿಸಿದೆ. ಬಡತನ ನಿವಾರಣೆ, ಆರೋಗ್ಯ ಸೇವೆಗಳ ವಿಸ್ತರಣೆ, ಶುದ್ಧ ಇಂಧನ ಬಳಕೆ, ಡಿಜಿಟಲ್ ಮೂಲಸೌಕರ್ಯ ಹಾಗೂ ಪರಿಸರ ಸಂರಕ್ಷಣಾ ಕ್ರಮಗಳಿಂದ ಸಮಗ್ರ ಅಭಿವೃದ್ಧಿ ಸಾಧ್ಯವಾಗಿದೆ. ಇದು ಸಮಾನತೆ, ಸಮೃದ್ಧಿ ಮತ್ತು ಹಸಿರು ಭವಿಷ್ಯಕ್ಕೆ ದಾರಿ ಮಾಡಿಕೊಟ್ಟಿದೆ ಎಂದು ತಿಳಿಸಿದರು. ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಜನಸಾಮನ್ಯರಿಗೆ, ಜನಪ್ರತಿನಿಧಿಗಳಿಗೆ, ಆಡಳಿತ ವರ್ಗದವರಿಗೆ ಮನವರಿಕೆ ಮಾಡುವಲ್ಲಿ ನಿರಿಕ್ಷಿತ ಸಮಯದಲ್ಲಿ ಗುರಿಗಳನ್ನು ಸಾಧಿಸುವಲ್ಲಿ ಸುದ್ದಿ ವಾಹಿನಿಗಳು ಮತ್ತು ಪತ್ರಿಕಾ ಮಾಧ್ಯಮಗಳು ಪ್ರಮುಖ ಪಾತ್ರವಹಿಸುತ್ತವೆಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ .ಬಿ. ಮಡ್ಲೂರ ಸಭೆಗೆ ತಿಳಿಸಿದರು. 2030ರ ವೇಳೆಗೆ ನಿರೀಕ್ಷಿತ ಗುರಿಗಳನ್ನು ಸಾಧಿಸಲು ಅಗತ್ಯ ಪರಿಸರವನ್ನು ಈಗಾಗಲೇ ನಿರ್ಮಿಸಲಾಗಿದೆ. ಮುಂದಿನ ನಾಲ್ಕು ವರ್ಷಗಳಲ್ಲಿ ಪೂರ್ವ ನಿರೀಕ್ಷಿತ ಸಾಧನೆಯ ಕನಸು ಸಾಕರಾಗೊಳ್ಳುವ ಭರವಸೆ ಇದೆ ಎಂದು ಉಪ ಪ್ರಾಚಾರ್ಯರು ಐ ಜೆ ಪಾಪಣ್ಣ ನವರು ಸಭೆಗೆ ತಿಳಿಸಿದರು. ಜಿಲ್ಲಾ ಪಂಚಾಯತ್ ಇಲಾಖೆ, ಹಾಗೂ ತರಬೇತಿಯ ಸಂಯೋಜ–ಕರಾಗಿ ಡಾ.ಸಿದ್ದರಾಮ. ಹೆಚ್ ಎಮ್, ಸುಸ್ಥಿರ ಅಭಿವೃದ್ಧಿ ಗುರಿಗಳು ಕರ್ನಾಟಕ ಕೇಂದ್ರ, ಆಡಳಿತ ತರಬೇತಿ ಸಂಸ್ಥೆ ಮೈಸೂರಿನಿಂದ ಆಗಮಿಸಿ ಸುಸ್ಥಿರ ಅಭಿವೃದ್ಧಿ ಗುರಿಗಳಿಗೆ ಸಂಬಂಧಿಸಿದಂತೆ ವಿಶೇಷ ಉಪನ್ಯಾಸ ನೀಡಿದರು.

ತರಬೇತಿ ಸಂಸ್ಥೆಯ ಬೋಧಕರಾದ ಎಸ್ ಎಮ್ ಸುಣಗಾರ ಮತ್ತು ಆರ್. ಎಮ್ ಹರಿಜನ ರವರು ಹಾಗೂ ಕಚೇರಿಯ ಮಂಜುನಾಥ ಪತ್ತಾರ, ಶಂಕರ ಬಿರಾದಾರ, ಇತರೆ ಎಲ್ಲಾ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದರು.

## ರೈತ ಭಾಂದವರ ಗಮನಕ್ಕೆ

ಜನಶ್ರೀ ಟೈಮ್ಸ್ ಸುದ್ದಿ

ಗದಗ: ಜಿಲ್ಲೆಯಲ್ಲಿ ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಬೆಳೆದಿರುವ ಬೆಳೆಗಳ ಬೆಳೆ ಸಮೀಕ್ಷೆ ಈಗಾಗಲೇ ಪ್ರಗತಿಯಲ್ಲಿದ್ದು, ಇಲ್ಲಿಯವರೆಗೆ 2,83,704 ತಾಲೂಕುಗಳ (ಶೇ. 84.68) ಸಮೀಕ್ಷೆ ಕೈಗೊಳ್ಳಲಾಗಿದೆ.

2026–27 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ 3.35 ಲಕ್ಷ ತಾಕುಗಳಲ್ಲಿ ಬೆಳೆ ಸಮೀಕ್ಷೆಗೆ ಗುರಿ ನಿಗದಿಪಡಿಸಲಾಗಿದ್ದು, ಬೆಳೆ ಸಮೀಕ್ಷೆ ಕಾರ್ಯವು ಶೀಘ್ರದಲ್ಲೆ ಮುಕ್ತಾಯಗೊಳ್ಳಲಿದೆ. ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆಗಳ ಮಾಹಿತಿಯನ್ನು ಆಪ್ನಲ್ಲಿ ಛಾಯಾಚಿತ್ರ ಸಹಿತವಾಗಿ ಅಪ್ಲೋಡ್ ಮಾಡುವ ಉದ್ದೇಶದಿಂದ ಸಮೀಕ್ಷೆ ಆರಂಭಿಸಿದ್ದೇವೆ. ರೈತರು ಖಾಸಗಿ ನಿವಾಸಿಗಳ ಸಹಾಯವನ್ನು ಪಡೆದುಕೊಂಡು, ಮಾಹಿತಿ ದಾಖಲಿಸಲು ಅವಕಾಶ ಕಲ್ಪಿಸಲಾಗಿದೆ. ಈ ಬಗ್ಗೆ ಗ್ರಾಮ ಪಂಚಾಯತ ಮಟ್ಟದಲ್ಲಿ ಜಾಗೃತಿ ಮೂಡಿಸಿದ್ದೇವೆ. ಈ ದೆಸೆಯಲ್ಲಿ ಜಿಲ್ಲೆಯ ರೈತರಿಗೆ, ಖಾಸಗಿ ನಿವಾಸಿಗಳಿಗೆ ಹಾಗೂ ಮೇಲ್ವಿಚಾರಕರಿಗೆ ತಾಲೂಕು ಮಟ್ಟದಲ್ಲಿ ತರಬೇತಿ ಹಾಗೂ ಗುಂಪು ಕರೆ ಮುಖಾಂತರ ಸಂಪೂರ್ಣ ಮಾಹಿತಿಯನ್ನು ನೀಡಲಾಗಿರುತ್ತದೆ. ಜಿಲ್ಲೆಯ ಬೆಳೆ ಸಮೀಕ್ಷೆ ಬಾಕಿ ಇರುವ ಎಲ್ಲಾ ರೈತರು ಸಮೀಕ್ಷೆಯಲ್ಲಿ ಪಾಲ್ಗೊಳ್ಳಬೇಕು. ಇದರಿಂದ ಕೃಷಿ, ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆಯಿಂದ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆಯಲು ಅನುಕೂಲವಾಗುತ್ತದೆ. ಜೊತೆಗೆ ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ಫಲಾನುಭವಿ ನೋಂದಣಿ, ಬೆಳೆ ವಿಮೆ ಯೋಜನೆಯಡಿ ತಾಲೂಕುವಾರು ಬೆಳೆ ಪರಿಶೀಲನೆ, ಬೆಳೆ ಸಾಲ ಪಡೆಯಲು ಮತ್ತು ಬೆಳೆ ಹಾನಿ ಪರಿಶೀಲನೆಗೆ ಸಹಾಯವಾಗುತ್ತದೆ. ಕೂಡಲೇ ಜಿಲ್ಲೆ ಎಲ್ಲ ರೈತರುಗಳು ತಮ್ಮ ಎಲ್ಲಾ ಜಮೀನುಗಳ ಬೆಳೆ ಸಮೀಕ್ಷೆಯನ್ನು ಕೈಗೊಳ್ಳಬೇಕೆಂದು ಎಂದು ಜಂಟಿ ಕೃಷಿ ನಿರ್ದೇಶಕಿ ಚೇತನಾ ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯದಲ್ಲಿ ಬರ ಘೋಷಣೆಗೆ ಒತ್ತಾಯ : ಎಕರೆಗೆ 50 ಸಾವಿರ ರೂ.ಪರಿಹಾರ ನೀಡಿ : ಎನ್.ರವಿಕುಮಾರ್

ಜನಶ್ರೀ ಟೈಮ್ಸ್ ಸುದ್ದಿ



ಮುದ್ದೇಬಿಹಾಳ: ರಾಜ್ಯದಲ್ಲಿ ಅದರಲ್ಲೂ ಉತ್ತರ ಕರ್ನಾಟಕ ಭಾಗದಲ್ಲಿ ಭೀಕರ ಬರಗಾಲ ತಲೆದೋ–ರಿದ್ದು ರೈತರ ಪ್ರತಿ ಎಕರೆ ಜಮೀನಿಗೆ 50 ಸಾವಿರ ರೂ.ಬರ ಪರಿಹಾರ ನೀಡಬೇಕು ಎಂದು ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ, ವಿಧಾನಪ–ರಿಷತ್ ಸದಸ್ಯ ಎನ್.ರವಿಕುಮಾರ ಆಗ್ರಹಿಸಿದರು. ಬಿಜೆಪಿ ನಿಯೋಗದಿಂದ ಬರ ಅಧ್ಯಯನ ಪ್ರವಾಸ ನಡೆಸುವ ಮುನ್ನ ತಾಲ್ಲೂಕಿನ ಕುಂಟೋಜಿ ಬಸವೇಶ್ವರ ದೇವಸ್ಥಾನದಲ್ಲಿ ಗುರುವಾರ ರೈತರ ಸಭೆಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಕೇವಲ ಕೇಂದ್ರದತ್ತ ಬೆರಳು ಮಾಡದೇ ಎಷ್ಟು ಪ್ರಮಾಣದಲ್ಲಿ ಹಾನಿಯಾಗಿದೆ ಎಂಬುದನ್ನು ಲೆಕ್ಕ ಕೊಟ್ಟರೆ ಕೇಂದ್ರ ಸರ್ಕಾರ ನೆರವು ನೀಡಲು ಸಾಧ್ಯವಿದೆ.ಆದರೆ ಈ ಸರ್ಕಾರ ಏನೂ ಮಾಡುತ್ತಿಲ್ಲ.ದಿಲ್ಲಿಯಲ್ಲಿ ಸಂಪುಟ ವಿಸ್ತರಣೆಯಲ್ಲಿ ಕಾಲಹರಣ ಮಾಡುತ್ತಿದೆ ಎಂದು ಆರೋಪಿಸಿದರು. ರೈತರ ಬೆಳೆವಿಮೆಯನ್ನು ಸರ್ಕಾರವೇ ಕಟ್ಟುವ ವ್ಯವಸ್ಥೆ ಮಾಡಬೇಕು.ಬರ ಬಂದರೆ ರೈತರ ಸಾಲ ಮನ್ನಾ ಮಾಡಬೇಕು.ಇದಕ್ಕೆ ನಿಯಮ ಜಾರಿ ಮಾಡಬೇಕು.ಈ ಭಾಗದಲ್ಲಿ ಹೊಟ್ಟೆಪಾಡಿಗಾಗಿ ಗುಳೇ ಹೋಗುವವರ ಸಂಖ್ಯೆ ಹೆಚ್ಚಿದೆ.ರೈತರ ಮುಂದಿನ ಜೀವನ ಚೆನ್ನಾಗಿ ಆಗಬೇಕಾದರೆ ರಾಜ್ಯದ ಎಲ್ಲ ಕೆರೆಗಳ ಹೂಳೆತ್ತೇವ ಕೆಲಸ ಸರ್ಕಾರ ಮಾಡಬೇಕು.ಕೆರೆಗಳ ಹೂಳನ್ನು ರೈತರ ಹೊಲಗಳಿಗೆ ಉಚಿತವಾಗಿ ತಗೆದುಕೊಂಡು ಹೋಗಲು ಅವಕಾಶ ನೀಡಬೇಕು.ಸದ್ಯಕ್ಕೆ ಬಿತ್ತನೆಗೆ ತ್ವರಿತವಾಗಿ 15 ಸಾವಿರ ರೂ.ಸರ್ಕಾರ ರೈತ–ರಿಗೆ ನೀಡಬೇಕು.ಕೃಷ್ಣಾ ಮೇಲ್ದಂಡೆ ಯೋಜನೆಯ ಆಲಮಟ್ಟಿ ಜಲಾಶಯವನ್ನು ಎತ್ತರಿಸುವ ಕೆಲಸ ಮಾಡಿದರೆ ನಿಮ್ಮ ಫೋಟೋ ಹಾಕಿಕೊಂಡು ರೈತರು ಪೂಜೆ ಮಾಡುತ್ತಿದ್ದರು.ಆದರೆ ಈ ಗ್ಯಾರಂಟಿಗಳು ಯಾರ ಜೀವನ ಉದ್ಧಾರ ಮಾಡುತ್ತಿವೆ ಎಂಬುದು ಗೊತ್ತಾಗುತ್ತಿಲ್ಲ.ಒಂದು ಲಕ್ಷ ಕೋಟಿ ರೂ.ಗಳನ್ನು ತಂದು ಕೃಷ್ಣಾ ಕೊಳ್ಳದ ನೀರಾವರಿ ಯೋಜನೆಗಳನ್ನು ಪೂರ್ಣಗೊಳಿಸಲು ಮುಂದಾಗಬೇಕು ಎಂದು ಸರ್ಕಾರವನ್ನು ರವಿಕುಮಾರ ಆಗ್ರಹಿಸಿದರು. ಬಿಜೆಪಿ ರೈತಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಮಾತನಾಡಿ, ಕುಂಟೋಜಿಯಲ್ಲಿ ಹೊಸದಾದ ಕೆರೆ ನಿರ್ಮಿಸಬೇಕು ಎಂದು ರೈತರು ಮನವಿ ಮಾಡಿದ್ದಾರೆ.ಮುಂದಿನ ಚುನಾವಣೆಯಲ್ಲಿ ನಮ್ಮದೇ ಸರ್ಕಾರ ಬಂದಾಗ ಖಂಡಿತವಾಗಿ ಇಲ್ಲಿ ಕೆರೆ ನಿರ್ಮಿಸಿಕೊಡುವ ಕುರಿತು ಮಾತು ನೀಡಿದ್ದೇನೆ.ಆದರೆ ಇವತ್ತಿನ ಪರಿಸ್ಥಿತಿ ಭೀಕರ ಬರಗಾಲ ಇದೆ.ಬಿತ್ತಿರುವ ಬೆಳೆ ನಾಶವಾಗಿದೆ. ಕುಡಿವ ನೀರಿನ ಸಮಸ್ಯೆ ಇದೆ. ಜಾನುವಾರುಗಳಿಗೆ ಮೇವಿನ ಕೊರತೆ ಇದೆ.ನೀರಾವರಿ ಇದ್ದ ಭಾಗದಲ್ಲಿ ಇಳುವರಿ ಕಡಿಮೆ ಆಗುವ ಆತಂಕ ಇದ್ದು ರೈತರು ಸಮಸ್ಯೆಯಲ್ಲಿದ್ದಾರೆ.ಬರಗಾಲ ಪೀಡಿತ ತಾಲ್ಲೂಕು ಎಂದು ಘೋಷಣೆ ಮಾಡಲು ಸರ್ಕಾರದ ಮೇಲೆ ಒತ್ತಡ ಹೇರಲು ಸದನದಲ್ಲಿ ಬಿಜೆಪಿಯಿಂದ ಒತ್ತಾಯಿಸಬೇಕು ಎಂದು ಎನ್.ರವಿಕುಮಾರ ಅವರಿಗೆ ನಡಹಳ್ಳಿ ಮನವಿ ಮಾಡಿದರು.

ವಿಧಾನ ಪರಿಷತ್ ಸದಸ್ಯ ಹಣಮಂತ ನಿರಾಣಿ ಮಾತನಾಡಿ, 50 ರ್ಷಗಳಲ್ಲಿ ಇಲ್ಲದ ಕಂಡರೆಯದ ಬರ ಪರಿಸ್ಥಿತಿ ಈಗ ಕಾಣುತ್ತಿದ್ದೇವೆ. ರೈತರು ಬಿತ್ತನೆ ಮಾಡಿದ್ದಾರೆ.ಬಿತ್ತಿರುವ ಬೆಳೆ ಕೈಗೆ ಬರುವ ಪರಿಸ್ಥಿತಿ ಇಲ್ಲ.ನಮ್ಮ ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಹಾಗೂ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ತೀರ್ಮಾನದಂತೆ ರೈತನ ಮನೆ ಬಾಗಿಲಿಗೆ ಹೋಗಿ ಅವರ ಅಳಲು ಆಲಿಸುವ ಕೆಲಸ ಬಿಜೆಪಿ ತಂಡಗಳು ವಿವಿಧ ಭಾಗಗಳಲ್ಲಿ ಮಾಡುತ್ತಿದ್ದೇವೆ. ಈ ಭಾಗದಲ್ಲಿ ಸಂಪೂರ್ಣ ಬರಗಾಲ ಎಂದು ಘೋಷಣೆ ಮಾಡಬೇಕು ಎಂದು ನಮ್ಮ ಪಕ್ಷದ ವತಿಯಿಂದ ಒತ್ತಾಯಿಸುತ್ತಿದ್ದೇವೆ ಎಂದರು. ಜಿಪಂ ಮಾಜಿ ಸದಸ್ಯ ಗಂಗಾಧರ ನಾಡಗೌಡ ಮಾತನಾಡಿ, ಬೆಳೆವಿಮೆ ಕಟ್ಟಿದ ರೈತರಿಗೆ ಜಿಪಿ–ಎಸ್ ಮಾಡಲು ತಿಳಿಸುತ್ತಿದ್ದು ಜಮೀನಿನಲ್ಲಿ ಸಾಕಷ್ಟು ರೈತರು ಹರಗಿದ್ದಾರೆ.ಸರ್ಕಾರದಿಂದ ಅಧ್ಯಯನ ಕೂಡ ಆಗಿಲ್ಲ.ಬೆಳೆವಿಮೆಗೆ ಕಟ್ಟಿರುವ ಹಣ ಕೂಡಾ ವಾಪಸ್ ಬರುವುದಿಲ್ಲ.ರೈತರಿಗೆ ಸರ್ಕಾರದಿಂದ ಪರಿಹಾರ ಕೊಡಿಸಲು ಪ್ರಯತ್ನ ನಮ್ಮ ಪಕ್ಷದ ಮುಖಂಡರು ಮಾಡಬೇಕು ಎಂದರು. ಯುವ ರೈತ ಬಸವರಾಜ ಕಾಟಿ ಮಾತನಾಡಿ, ನಾನು ಉನ್ನತ ಶಿಕ್ಷಣ ಪಡೆದುಕೊಂಡು ನೌಕರಿ ಹಿಡಿಯಬೇಕೆಂಬ ಆಸೆ ತೊರೆದು ರೈತನಾಗಬೇಕು ಎಂಬ ಆಸೆಯಿಂದ ಹೊಲ ಉಳುಮೆ ಮಾಡಲು ಮುಂದಾದರೆ ಹಾಕಿದ್ದ ಖರ್ಚು ಬರದಂತಾಯಿತು. ಸರ್ಕಾರಗಳು ನೆರವಿಗೆ ಬರುತ್ತಿಲ್ಲ.ಹೀಗಾದರೆ ಯುವಕರು ಕೃಷಿಯತ್ತ ಹೇಗೆ ಮುಖ ಮಾಡುವುದಕ್ಕೆ ಸಾಧ್ಯವಿದೆ ಎಂದು ಪ್ರಶ್ನಿಸಿದರು.ತಾಲ್ಲೂಕಿನ ಹೊಕ್ರಾಣಿ ಕ್ರಾಸ್‌ನಲ್ಲಿರುವ ರೈತನ ಜಮೀನೊಂದರಲ್ಲಿ ಬಿಜೆಪಿ ನಾಯಕರು ನಾಟಿಯಾಗದ ಬೆಳೆಯನ್ನು ವೀಕ್ಷಿಸಿದರು.ಕುಂಟೋ–ಜಿಯ ರೈತರು ಬರ ಪರಿಸ್ಥಿತಿಯ ಕುರಿತು ಬಿಜೆಪಿ ನಾಯಕರ ಗಮನಕ್ಕೆ ತಂದರು. ರಾಯಬಾಗ ಶಾಸಕ ಧುರ್ಯೋಧನ ಐಹೊಳೆ,ಬಿಜೆಪಿ ಬೆಳಗಾವಿ ಸಹ ಪ್ರಭಾರಿ ಬಸವರಾಜ ಯಂಕಂಚಿ, ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ,ಮಂಡಲ ಅಧ್ಯಕ್ಷ ಜಗದೀಶ ಪಂಪಣ್ಣವರ, ಎಸ್ಸಿ ಮೋರ್ಚಾ ರಾಜ್ಯ ಪ್ರಧಾನ ಕಾರ್ಯದರ್ಶಿ ಉಮೇಶ ಕಾರಜೋಳ, ಮುಖಂಡರಾದ ಎಂ.ಎಸ್.ಪಾಟೀಲ, ಮಲಕೇಂದ್ರಗೌಡ ಪಾಟೀಲ,ಗುರು ದೇಶಮುಖ,ಎಂ.ಬಿ.ಅಂಗಡಿ,ಕೆಂಚಪ್ಪ ಬಿರಾದಾರ,ಮಲ್ಲಿಕಾರ್ಜುನ ದೇವರಮನಿ, ಗಿರೀಶಗೌಡ ಪಾಟೀಲ, ಪುರಸಭೆ ಮಾಜಿ ಸದಸ್ಯೆ ಸಂಗಮ್ಮ ದೇವರಳ್ಳಿ, ಗೌರಮ್ಮ ಹುನಗುಂದ,ಸಂಗನಗೌಡ ಪಾಟೀಲ, ಅಶೋಕ ರಾಠೋಡ,ಸಂತೋಷ ಬಾದರಬಂಡಿ, ರವೀಂದ್ರ ಬಿರಾದಾರ, ಕುಂಟೋಜಿ ಬಸವೇಶ್ವರ ದೇವಸ್ಥಾನ ಕಮೀಟಿ ಅಧ್ಯಕ್ಷ ಗುರುಲಿಂಗ ಸುಲ್ಲಳ್ಳಿ,ಮಾಜಿ ಸೈನಿಕ ನಾಗಲಿಂಗಯ್ಯ ಮಠ ಸೇ–ರಿದಂತೆ ಹಲವರು ಇದ್ದರು.ಕುಂಟೋಜಿ ಬಸವೇಶ್ವರ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿದ ಬಿಜೆಪಿ ನಿಯೋಗ ಜಿಲ್ಲೆಯಲ್ಲಿ ಬರ ಅಧ್ಯಯನ ಪ್ರವಾಸವನ್ನು ನಡೆಸಿತು.

### ಪಪ್ಪುಗೆ ಸೊಪ್ಪಿನ ಬಗ್ಗೆ ಏನಾದರೂ ಗೊತ್ತಾ

**ಪಪ್ಪುಗೆ ಸೊಪ್ಪಿನ ಬಗ್ಗೆ ಏನಾದರೂ ಗೊತ್ತಾ ರೈತರ ಬಗ್ಗೆ ಏನಾದರೂ ತಿಳಿದಿದೆಯೇ ರಾಹುಲ್ ಗಾಂಧಿ ಇದರಸೇ ಆಲೂ ಡಾಲೋ ಉದರಸೇ ಸೋನಾ ಆಯೇಗಾ ಎನ್ನುತ್ತಾರೆ. ಅವರಿಗೆ ರೈತರ ಕಷ್ಟ ಏನು ಗೊತ್ತಿದೆ ಎಂದು ಬಿಜೆಪಿಯ ಎನ್.ರವಿಕುಮಾರ ಲೇವಡಿ ಮಾಡಿದರು.**


## 3ನೇ ಆಷಾಢ ಶುಕ್ರವಾರ : ಲಕ್ಷ್ಮಿ ಅಲಂಕಾರದಲ್ಲಿ ಕಂಗೊಳಿಸಿದ ಚಾಮುಂಡೇಶ್ವರಿ ದೇವಿ



ಮೈಸೂರು: ಆಷಾಢ ಮಾಸದ ಮೂರನೇ ಶುಕ್ರವಾರದ ಅಂಗವಾಗಿ ಇಂದು ನಗರ ದೇವತೆ ಚಾಮುಂಡೇಶ್ವರಿ ದೇವಿಗೆ ಮಹಾಲಕ್ಷ್ಮಿ ಅಲಂಕಾರ ಮಾಡಲಾಗಿದ್ದು, ದೇವಿಯ ದರ್ಶನಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತಸಮೂಹವೇ ಹರಿದುಬಂದಿತ್ತು. ಬ್ರಾಹಿ ಮುಹೂರ್ತದಲ್ಲಿ ಪೂಜೆ ಸಲ್ಲಿಸಲು ಹಾಗೂ ದೇವಿ ದರ್ಶನ ಪಡೆಯಲು ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ರಸ್ತೆ ಹಾಗೂ ಮೆಟ್ಟಿಲು ಮಾರ್ಗವಾಗಿ ಬೆಟ್ಟಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದರು.

ಇಡೀ ದೇವಸ್ಥಾನದ ಒಳಾಂಗಣವನ್ನು ಕಮಲ, ಚೆಂಡು ಹೂ, ಸೇವಂತಿಗೆ, ಕನಕಾಂಬರ ಸೇರಿದಂತೆ ಐದು ಬಗೆಯ ಹೂಗಳು, ಕಿತ್ತಲೆ, ಮಾವು, ವಿವಿಧ ಬಗೆಯ ಹಣ್ಣುಗಳಿಂದ ಅಲಂಕರಿಸಲಾಗಿತ್ತು. ಮುಂಜಾನೆ 3.30ಕ್ಕೆ ದೇವಾಲಯದ ಬಾಗಿಲು ತೆರೆಯುತ್ತಿದ್ದಂತೆ ಸಾವಿರಾರು ಭಕ್ತರು ಸಾಲುಗಟ್ಟಿ ನಿಂತು ಕೈಯಲ್ಲಿ ಕಮಲದ ಹೂ, ಅರಿಶಿನದ ತಟ್ಟೆ ಹಿಡಿದು ಪ್ರತಿಯೊಬ್ಬರೂ ದೇವರ ದರ್ಶನಕ್ಕೆ ಕಾತುರದಿಂದ ಕಾಯುತ್ತಿದ್ದ ದೃಶ್ಯಗಳು ಕಂಡುಬಂದವು.ಬೆಳಗಿನ ಜಾವದಿಂದಲೇ ದೇವಿಗೆ ಕುಂಕುಮಾರ್ಚನೆ, ಮಹಾಮಂಗಳಾರತಿ ಸೇ-ರಿದಂತೆ ಅರ್ಚಕರ ವೇದಘೋಷಗಳು, ಮಂತ್ರಘೋಷಗಳು ಮಾರ್ಧನಿಸಿದವು. ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿ-ಜಯೇಂದ್ರ ಸೇರಿದಂತೆ ಮತ್ತಿತರ ಗಣ್ಯರು ದೇವಿಗೆ ವಿಶೇಷ ಪೂಜೆ ಸಲ್ಲಿಸಿದರು.ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಹಾಗೂ ದೇವಾಲಯದ ಆಡಳಿತ ಮಂಡಳಿ ಸೂಕ್ತ ಕ್ರಮ ಕೈಗೊಂಡಿತ್ತು.ಲಲಿತಮಹಲ್ ಮೈದಾನದಿಂದ ಚಾಮುಂಡಿ ಬೆಟ್ಟಕ್ಕೆ ಸಾರ್ವಜನಿಕರಿಗಾಗಿ ಉಚಿತ ಬಸ್ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಭಕ್ತರ ಸುರಕ್ಷತೆ ಹಾಗೂ ಸುಗಮ ದರ್ಶನಕ್ಕಾಗಿ ವಿಐಪಿ ಶಿಫಾರಸ್ಸು ವಾಹನಗಳು ಹಾಗೂ ಸಾರ್ವಜನಿಕರ ಖಾಸಗಿ ವಾಹನಗಳಿಗೆ ಬೆಟ್ಟದ ಪ್ರವೇಶವನ್ನು ಸಂಪೂರ್ಣವಾಗಿ ನಿಷೇಧಿಸಲಾಗಿತ್ತು. ವೃದ್ಧರು, ಮಹಿಳೆಯರು ಹಾಗೂ ಮಕ್ಕಳ ಅನುಕೂಲಕ್ಕಾಗಿ ಹೆಚ್ಚುವರಿ ಬಸ್ ವ್ಯವಸ್ಥೆಯನ್ನು ಒದಗಿಸಲಾಗಿದ್ದು, ಕುಡಿಯುವ ನೀರು, ವೈದ್ಯಕೀಯ ತಂಡ ಹಾಗೂ ಪೊಲೀಸರು ಬೆಟ್ಟದಲ್ಲಿ ಅಗತ್ಯ ವ್ಯವಸ್ಥೆಯನ್ನು ಕಲ್ಪಿಸಲಾಗಿತ್ತು. ಆಷಾಢ ಮಾಸದಲ್ಲಿ ತಾಯಿ ಚಾಮುಂಡೇಶ್ವರಿ ದೇವಿಯನ್ನು ಕಣ್ತುಂಬಿಕೊಳ್ಳುವುದಿರುವುದು ಸಾಧ್ಯವೇ? ವರ್ಷಕ್ಕೊಮ್ಮೆ ಬಂದರೂ ಇಂದಿನ ದರ್ಶನದ ಅನುಭವವೇ ಬೇರೆ ಎಂದು ದೇವಿಯ ದರ್ಶನ ಪಡೆದು ಹೊರಬಂದ ಭಕ್ತರೊಬ್ಬರು ಭಾವುಕರಾಗಿ ನುಡಿದರು.

## ESA ಕರಡು ಅಧಿಸೂಚನೆ : ಸಂಸದರಿಗೆ ಮಲೆನಾಡು ಕರಾವಳಿ ಜನಪರ ಒಕ್ಕೂಟ ಎಚ್ಚರಿಕೆ



ಬೆಂಗಳೂರು: ಪಶ್ಚಿಮ ಘಟ್ಟ ವ್ಯಾಪ್ತಿಯನ್ನು ಪರಿಸರ ಸೂಕ್ಷ್ಮ ವಲಯ (ESA) ಎಂದು ಘೋಷಿಸಲು ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ ಹೊರಡಿಸಿರುವ ಹೊಸ ಕರಡು ಅಧಿಸೂಚನೆಗೆ ತೀವ್ರ ವಿರೋಧ ವ್ಯಕ್ತಪಡಿಸಿರುವ ಮಲೆನಾಡು ಕರಾವಳಿ ಜನಪರ ಒಕ್ಕೂಟ, ಮಲೆನಾಡು ಭಾಗದ ರೈತರು ಹಾಗೂ ಜನರ ಅಭಿಪ್ರಾಯವನ್ನು ಪರಿಗಣಿಸದಿದ್ದರೆ ಆರು ಜಿಲ್ಲೆಗಳ ಸಂಸದರ ಕಚೇರಿ ಎದುರು ಧರಣಿ ನಡೆಸುವುದಾಗಿ ಎಚ್ಚರಿಕೆ ನೀಡಿದೆ.

ಒಕ್ಕೂಟದ ರಾಜ್ಯ ಸಂಚಾಲಕ ಅನಿಲ್ ಹೊಸಕೊಪ್ಪ ಮಾತನಾಡಿ, ಈಗಿರುವ ಅರಣ್ಯ ಸಂಬಂಧಿತ ಕಾನೂನುಗಳೇ ರೈತರ ಬದುಕಿಗೆ ಸಂಕಷ್ಟ ತಂದಿದ್ದು, ಹೊಸ ಕರಡು ಅಧಿಸೂಚನೆಯಿಂದ ಮತ್ತಷ್ಟು ಆತಂಕ ಸೃಷ್ಟಿಯಾಗಿದೆ ಎಂದು ಹೇಳಿದರು. ಮಲೆನಾಡಿನ ಜನಪ್ರತಿನಿಧಿಗಳು ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಿಸಿದರು. ಕರಡು ಅಧಿಸೂಚನೆಯ ಪ್ರಕಾರ ಕರ್ನಾಟಕದ ಶಿವಮೊಗ್ಗ, ಚಿಕ್ಕಮಗಳೂರು, ಕೊಡಗು, ಹಾಸನ, ಉತ್ತರ ಕನ್ನಡ, ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳ ಪಶ್ಚಿಮ ಘಟ್ಟ ವ್ಯಾಪ್ತಿಯ ಹಲವು ಗ್ರಾಮಗಳನ್ನು ಪರಿಸರ ಸೂಕ್ಷ್ಮ ವಲಯಕ್ಕೆ ಸೇರಿಸಲು ಪ್ರಸ್ತಾಪಿಸಲಾಗಿದೆ. ಉತ್ತರ ಕನ್ನಡ ಜಿಲ್ಲೆಯ 556, ಶಿವಮೊಗ್ಗ 446, ಚಿಕ್ಕಮಗಳೂರು 137, ಕೊಡಗು 53, ದಕ್ಷಿಣ ಕನ್ನಡ 43 ಹಾಗೂ ಉಡುಪಿ ಜಿಲ್ಲೆಯ 34 ಗ್ರಾಮಗಳು ಪಟ್ಟಿಯಲ್ಲಿ ಸೇರಿವೆ. ಶಿವಮೊಗ್ಗ ಜಿಲ್ಲೆಯ ತೀರ್ಥಹಳ್ಳಿ, ಹೊಸನಗರ ಮತ್ತು ಸಾಗರ ತಾಲ್ಲೂಕುಗಳು, ಚಿಕ್ಕಮಗಳೂರಿನ ಮೂಡಿಗೆರೆ, ಕಳಸ, ಕೊಪ್ಪ, ಶೃಂಗೇರಿ ಸೇರಿದಂತೆ ಹಲವು ಪ್ರದೇಶಗಳು ಕರಡು ಪಟ್ಟಿಯಲ್ಲಿ ಸ್ಥಾನ ಪಡೆದಿವೆ. ಈ ಅಧಿಸೂಚನೆ ಇನ್ನೂ ಕರಡು ಹಂತದಲ್ಲಿದ್ದು, ಸಾರ್ವಜನಿಕರು, ರೈತರು, ಗ್ರಾಮ ಪಂಚಾಯಿತಿಗಳು ಹಾಗೂ ವಿವಿಧ ಸಂಘ-ಸಂಸ್ಥೆಗಳು ತಮ್ಮ ಆಕ್ಷೇಪಣೆ ಮತ್ತು ಸಲಹೆಗಳನ್ನು ಸಲ್ಲಿಸಲು ಕೇಂದ್ರ ಸರ್ಕಾರ 60 ದಿನಗಳ ಕಾಲಾವಕಾಶ ನೀಡಿದೆ. ಈ ಅವಧಿಯಲ್ಲಿ ಸಲ್ಲಿಕೆಯಾಗುವ ಅಭಿಪ್ರಾಯಗಳನ್ನು ಪರಿಶೀಲಿಸಿದ ಬಳಿಕವೇ ಅಂತಿಮ ಅಧಿಸೂಚನೆ ಪ್ರಕಟಿಸಲಾಗುವುದು ಎಂದು ಸಚಿವಾಲಯ ತಿಳಿಸಿದೆ. ಕಸ್ತೂರಿ ರಂಗನ್ ವರದಿ ಆಧಾರದ ಮೇಲೆ ರಾಜ್ಯದ ಪಶ್ಚಿಮಘಟ್ಟ ವ್ಯಾಪ್ತಿಯ ಸುಮಾರು 20,668 ಚದರ ಕಿ.ಮೀ. ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯವೆಂದು ಗುರುತಿಸಿರುವುದಕ್ಕೆ ರಾಜ್ಯ ಸರ್ಕಾರ, ಜನಪ್ರತಿನಿಧಿಗಳು ಹಾಗೂ ವಿವಿಧ ಸಂಘಟನೆಗಳು ಈ ಹಿಂದೆ ಸಲ್ಲಿಸಿದ ಮನವಿಗಳನ್ನೂ ಪರಿಗಣಿಸಿಲ್ಲ ಎಂದು ಒಕ್ಕೂಟ ಆರೋಪಿಸಿದೆ. ಆಕ್ಷೇಪಣೆ ಸಲ್ಲಿಸಲು ಇಚ್ಛಿಸುವವರು ಅಧಿಸೂಚನೆ ಪ್ರಕಟವಾದ ದಿನಾಂಕದಿಂದ 60 ದಿನಗಳೊಳಗೆ ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದ ಕಾರ್ಯದರ್ಶಿಗೆ ಲಿಖಿತ ರೂಪದಲ್ಲಿ ಅಥವಾ esz-mef@nic.in ಇ-ಮೇಲ್ ಮೂಲಕ ತಮ್ಮ ಅಭಿಪ್ರಾಯಗಳನ್ನು ಸಲ್ಲಿಸಬಹುದು ಎಂದು ಅನಿಲ್ ಹೊಸಕೊಪ್ಪ ಮನವಿ ಮಾಡಿದ್ದಾರೆ.

# ಜೀವಾವಧಿಶಿಕ್ಷೆಗೊಳಗಾಗಿರುವ ಮಾಜಿ ಶಾಸಕ ವಿನಯ್ ಕುಲಕರ್ಣಿಗೆ ಮಧ್ಯಂತರ ಜಾಮೀನು ಮಂಜೂರು

ಬೆಂಗಳೂರು: ಹುಬ್ಬಳ್ಳಿ-ಧಾರವಾಡದಲ್ಲಿನ ಬಿಜೆಪಿ ಮುಖಂಡ ಯೋಗೇಶ್ ಗೌಡ ಹತ್ಯೆ ಪ್ರಕರಣದಲ್ಲಿ ಜೀವಾವಧಿ ಶಿಕ್ಷೆಗೆ ಗುರಿಯಾಗಿರುವ ಕಾಂಗ್ರೆಸ್ ನ ಮಾಜಿ ಶಾಸಕ ವಿನಯ್ ಕುಲಕರ್ಣಿ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಹೈಕೋರ್ಟ್ ಮಾನ್ಯ ಮಾಡಿದ್ದು, ಮಧ್ಯಂತರ ಜಾಮೀನು ನೀಡಿದೆ.

ಹೈಕೋರ್ಟ್ ನ ನ್ಯಾಯಮೂರ್ತಿ ಎಂ. ನವಾಜ್ ಮತ್ತು ನ್ಯಾಯಮೂರ್ತಿ ಜಿ. ಬಸವರಾಜ ಅವರನ್ನೊಳಗೊಂಡ ವಿಭಾಗೀಯ ಪೀಠ ಜಾಮೀನು ಅರ್ಜಿಯ ವಿಚಾರಣೆ ನಡೆಸಿತ್ತು. ಐದು ಲಕ್ಷ ವೈಯಕ್ತಿಕ ಬಾಂಡ್ ಮತ್ತು ಭದ್ರತೆ ಜೊತೆ ಶಿಕ್ಷಾ ಬಂಧಿಯನ್ನು ಮಧ್ಯಂತರ ಜಾಮೀನಿನ ಮೇಲೆ ಬಿಡುಗಡೆ ಮಾಡಲು ಹೈಕೋರ್ಟ ಅನುಮತಿಸಿದೆ. ಆದರೆ ವಿದೇಶಕ್ಕೆ ತೆರಳಬಾರದು ಎಂಬುದು ಸೇರಿದಂತೆ ಅನೇಕ ಷರತ್ತುಗಳನ್ನು ವಿಧಿಸಲಾಗಿದೆ. ಕೊಲೆ ಪ್ರಕರಣದಲ್ಲಿ ವಿನಯ್ ಕುಲಕರ್ಣಿ ದೋಷಿ ಎಂದು ತೀರ್ಮಾನಿಸಿ ಬೆಂಗಳೂರಿನ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಶಿಕ್ಷೆ ವಿಧಿಸಿದ್ದ ತೀರ್ಪಿಗೂ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಶಿಕ್ಷೆಯನ್ನು ಅಮಾನತ್ತಿನಲ್ಲಿ ಇರಿಸಲಾಗಿದೆ. ಈ ಮೊದಲು ವಿಚಾರಣಾ ನ್ಯಾಯಾಲಯದ ತೀರ್ಪಿನಿಂದ ವಿನಯ್ ಕುಲಕರ್ಣಿ ಅವರ ಶಾಸಕ ಸ್ಥಾನ ರದ್ದಾಗಿತ್ತು. ಹೈಕೋರ್ಟ್ ಜಾಮೀನು ನೀಡಿರುವುದರಿಂದ ಶಾಸಕ ಸ್ಥಾನಕ್ಕೆ ಮರು ಜೀವ ಬಂದಿದೆ. ಸಚಿವ ಸಂಪುಟ ವಿಸ್ತರಣೆಯ ಪ್ರಕ್ರಿಯೆಗಳು ಚಾಲ್ತಿಯಲ್ಲಿ ಇದ್ದಾಗಲೇ ಜಾಮೀನು ಸಿಕ್ಕಿರುವುದು ಭಾರೀ ರಾಜಕೀಯವಾಗಿ ಸಂಚಲನ ಮೂಡಿಸಿದೆ. ವಿನಯ್ ಕುಲಕರ್ಣಿ ಸೇರಿದಂತೆ ಇತರೇ ಹತ್ತು ಮಂದಿಗೆ ಶಿಕ್ಷೆ ಅಮಾನತ್ತಿನಲ್ಲಿರಿಸಿ ಜಾಮೀನು ನೀಡಲಾಗಿದೆ.

**ಹಿನ್ನೆಲೆ:**

2016ರ ಜೂನ್ 15ರಂದು ಧಾರವಾಡ ಜಿಲ್ಲಾ ಪಂಚಾಯತ್ ಸದಸ್ಯ ಹಾಗೂ ಬಿಜೆಪಿ ಮುಖಂಡ ಯೋಗೇಶ್ ಗೌಡ ಅವರನ್ನು ಧಾರವಾಡದ ಸಪ್ತಾಪುರದಲ್ಲಿರುವ ಅವರ ಜಿಮ್ ಸಮೀಪ ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆ ಮಾಡಿದ್ದರು. ಈ ಘಟನೆ ರಾಜ್ಯದಲ್ಲಿ ಭಾರೀ ರಾಜಕೀಯ ಸಂಚಲನಕ್ಕೆ ಕಾರಣವಾಗಿತ್ತು. ಆರಂಭದಲ್ಲಿ ಪ್ರಕರಣದ ತನಿಖೆಯನ್ನು ಧಾರವಾಡ ಗ್ರಾಮೀಣ ಪೊಲೀಸರು ನಡೆಸಿದರು. ಬಳಿಕ ರಾಜ್ಯ ಸರ್ಕಾರ ಪ್ರಕರಣವನ್ನು ಕೇಂದ್ರ ತನಿಖಾ ದಳ (ಸಿಬಿಐ)ಗೆ ವರ್ಗಾಯಿಸಲಾಗಿತ್ತು. ಸಿಬಿಐ ತನಿಖೆಯಲ್ಲಿ ಈ ಹತ್ಯೆ ಪೂರ್ವನಿಯೋಜಿತ ಪಿತೂರಿಯ ಭಾಗವಾಗಿದ್ದು, ಆಗಿನ ಕಾಂಗ್ರೆಸ್ ಶಾಸಕ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ವಿನಯ್ ಕುಲಕರ್ಣಿ ಸೇರಿದಂತೆ ಹಲವರು ಸಂಚು ರೂಪಿಸಿ ಕೃತ್ಯ ಎಸಗಿದ್ದಾರೆ ಎಂದು ಆರೋಪಿಸಲಾಯಿತು.

ಸಿಬಿಐ ಸಲ್ಲಿಸಿದ ಆರೋಪಪಟ್ಟಿಯಲ್ಲಿ ಭಾರತೀಯ ದಂಡ ಸಂಹಿತೆಯ 120-ಬಿ (ಅಪರಾಧಿಕ ಸಂಚು), 143, 147, 148 (ಅಕ್ರಮ ಕೂಟ ಮತ್ತು ಗಲಭೆ), 302 (ಕೊಲೆ), 109 (ಪ್ರಚೋದನೆ), 201 (ಸಾಕ್ಷ್ಯ ನಾಶ), 149 (ಸಾಮಾನ್ಯ ಉದ್ದೇಶದಡಿ ಅಪರಾಧ) ಸೇ-ರಿದಂತೆ ಹಲವು ಕಲಂಗಳನ್ನು ಅನ್ವಯಿಸಲಾಗಿ-ತ್ತು. ತನಿಖೆಯ ವೇಳೆ ಸಾಕ್ಷಿಗಳ ಹೇಳಿಕೆಗಳು, ಕರೆ ವಿವರಗಳು, ಹಣಕಾಸುವ್ಯವಹಾರಗಳ ಮಾಹಿತಿ ಹಾಗೂ ಇತರೆ ಸಂದರ್ಭೋಚಿತ ಸಾಕ್ಷ್ಯಗಳನ್ನು ಸಿಬಿಐ ನ್ಯಾಯಾಲಯದ ಮುಂದೆ ಮಂಡಿಸಿತ್ತು. ಪ್ರಕರಣದಲ್ಲಿ ಸಾಕ್ಷಿಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇದೆ ಎಂಬ ಆಧಾರದ ಮೇಲೆ ವಿನಯ್ ಕುಲಕರ್ಣಿ ಅವರನ್ನು 2020ರ ನವೆಂಬರ್‌ನಲ್ಲಿ ಸಿಬಿಐ ಬಂಧಿಸಿತ್ತು. ಬಳಿಕ ಅವರಿಗೆ ಹಲವು ಷರತ್ತುಗಳೊಂದಿಗೆ ಸುಪ್ರೀಂ ಕೋರ್ಟ್ ಜಾಮೀನು ನೀಡಿದ್ದು, ಧಾರವಾಡ ಜಿಲ್ಲೆಗೆ ಪ್ರವೇಶಿಸದಂತೆ ಹಾಗೂ ಸಾಕ್ಷಿಗಳೊಂದಿಗೆ ಸಂಪರ್ಕಿಸದಂತೆ ನಿರ್ಬಂಧ ವಿಧಿಸಲಾಗಿತ್ತು.




ದೀರ್ಘಕಾಲ ವಿಚಾರಣೆ ನಡೆಸಿದ ಬಳಿಕ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಸಿಬಿಐ ನ್ಯಾಯಾಲಯ 2026ರ ಏಪ್ರಿಲ್‌ನಲ್ಲಿ ವಿನಯ್ ಕುಲಕರ್ಣಿ ಸೇರಿದಂತೆ ಹಲವು ಆರೋಪಿಗಳನ್ನು ದೋಷಿಗಳೆಂದು ಘೋಷಿಸಿತು. ನಂತರ ಶಿಕ್ಷೆಯ ಪ್ರಮಾಣ ಪ್ರಕಟಿಸಿ ವಿನಯ್ ಕುಲಕರ್ಣಿ ಅವ-ರಿಗೆ ಜೀವಾವಧಿ ಶಿಕ್ಷೆ ಹಾಗೂ ದಂಡ ವಿಧಿಸಿತು. ನ್ಯಾಯಾಲಯವು ಹತ್ಯೆ ಪೂರ್ವನಿಯೋಜಿತ ಸಂಚಿನ ಫಲಿತಾಂಶವಾಗಿದ್ದು, ಆರೋಪಿಗಳ ವಿರುದ್ಧದ ಸಂದರ್ಭೋಚಿತ ಸಾಕ್ಷ್ಯಗಳು ಪರಸ್ಪರ ಹೊಂದಾಣಿಕೆಯಾಗಿವೆ ಎಂದು ತನ್ನ ತೀರ್ಪಿನಲ್ಲಿ ಅಭಿಪ್ರಾಯಪಟ್ಟಿತು. ಈ ತೀರ್ಪನ್ನು ಪ್ರಶ್ನಿಸಿ ವಿನಯ್ ಕುಲಕರ್ಣಿ ಕರ್ನಾಟಕ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಿದ್ದರು. ಮೇಲನವಿ ಅಂತಿಮವಾಗಿ ಇತ್ಯರ್ಥವಾಗುವವರೆಗೆ ಜೀವಾವಧಿ ಶಿಕ್ಷೆಯನ್ನು ಅಮಾನತುಗೊಳಿಸಿ ಜಾಮೀನು ನೀಡುವಂತೆ ಅವರು ಮನವಿ ಮಾಡಿಕೊಂಡಿದ್ದರು. ಅರ್ಜಿಯ ವಿಚಾರಣೆ ವೇಳೆ ಸಿಬಿಐ, ವಿಶೇಷ ನ್ಯಾಯಾಲಯದ ತೀರ್ಪು ಸಮರ್ಪಕ ಸಾಕ್ಷ್ಯಾಧಾರಗಳ ಮೇಲೆ ಆಧಾ-ರಿತವಾಗಿದ್ದು, ಶಿಕ್ಷೆ ಅಮಾನತುಗೊಳಿಸಬಾರದು ಎಂದು ವಾದಿಸಲಾಗಿತ್ತು. ವಿಚಾರಣಾ ನ್ಯಾಯಾಲಯದಲ್ಲಿ ವಾದ ಮಂಡಿಸಿದ್ದ ಸಿಬಿಐ ಪರ ಹೆಚ್ಚುವರಿ ಸಾಲಿಸಿಟರ್ ಜನರಲ್ ರಾಜು ಅವರು ಖುದ್ದು ಹೈಕೋರ್ಟ್‌ನಲ್ಲಿ ಜಾಮೀನಿಗೆ ವಿರೋಧ ವ್ಯಕ್ತ ಪಡಿಸಿ ವಾದ ಮಂಡಿಸಿದ್ದರು. ಇನ್ನೊಂದೆಡೆ, ಮೇಲ್ಮನವಿಯಲ್ಲಿ ಹಲವು ಕಾನೂನು ಅಂಶಗಳನ್ನು ಪರಿಶೀಲಿಸಬೇಕಿರುವುದ-ರಿಂದ ಶಿಕ್ಷೆ ಅಮಾನತುಗೊಳಿಸಿ ಜಾಮೀನು ನೀಡಬೇಕು ಎಂದು ವಿನಯ್ ಕುಲಕರ್ಣಿ ಪರ ವಕೀಲರು ನ್ಯಾಯಾಲಯಕ್ಕೆ ಮನವಿ ಮಾಡಿದರು. ನ್ಯಾಯಮೂರ್ತಿ ಎಂ. ನವಾಜ್ ಮತ್ತು ನ್ಯಾಯಮೂರ್ತಿ ಜಿ. ಬಸವರಾಜ ಅವರ ವಿಭಾಗೀಯ ಪೀಠವು ಎರಡೂ ಪಕ್ಷಗಳ ವಾದವನ್ನು ಆಲಿಸಿ , ಶಿಕ್ಷೆ ಅಮಾನತುಗೊಳಿಸಿ ಜಾಮೀನು ನೀಡಿದೆ. ಬಹುತೇಕ ನಾಳೆ ಆರೋಪಿಗಳು ಬಿಡುಗಡೆಯಾಗುವ ಸಾಧ್ಯತೆ ಇದೆ. ಮತ್ತೊಂದೆಡೆ ಮಧ್ಯಂತರ ಜಾಮೀನನ್ನು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಲು ಸಿಬಿಐ ತಯಾರಿ ನಡೆಸಿದೆ.

# ಮಂಗಳೂರಿನಲ್ಲಿ ಕ್ರೂಸ್ ಸೇವೆ ಆರಂಭಕ್ಕೆ ತಾತ್ವಿಕ ಒಪ್ಪಿಗೆ, ಮುಂದಿನ ತಿಂಗಳು ಸ್ಥಳ ಪರಿಶೀಲನೆ

ಬೆಂಗಳೂರು: ರಾಜ್ಯದಲ್ಲಿ ಸಮುದ್ರ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡುವ ಉದ್ದೇಶದಿಂದ ಮಂಗಳೂರಿನಲ್ಲಿ ಕ್ರೂಸ್ ಸೇವೆ ಆರಂಭಿಸುವ ಪ್ರಕ್ರಿಯೆಗೆ ಮಹತ್ವದ ವೇಗ ಸಿಕ್ಕಿದೆ ಎಂದು ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿಗಳಾದ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದರು. ದೇಶದ ಪ್ರಮುಖ ಕ್ರೂಸ್ ಸಂಸ್ಥೆಯಾದ ವಾಟರ್‌ವೇಸ್ ಲೀಶರ್ ಟೂರಿಸಂ ಲಿಮಿಟೆಡ್‌ಮಂಗಳೂರಿನಿಂದ ಕ್ರೂಸ್ ಸೇವೆ ಆರಂಭಿಸುವ ಸಾಧ್ಯತೆ ಕುರಿತು ತಾತ್ವಿಕ ಒಪ್ಪಿಗೆ ಸೂಚಿಸಿದ್ದು, ಮುಂದಿನ ತಿಂಗಳು ಸಂಸ್ಥೆಯ ತಾಂತ್ರಿಕ ತಂಡ ಮಂಗಳೂರಿಗೆ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಲಿದೆ.

ಪ್ರವಾಸೋದ್ಯಮ ಸಚಿವ ಕೆ.ಜೆ. ಜಾರ್ಜ್ ಅವರ ನಿರ್ದೇಶನದಂತೆ ಪ್ರವಾಸೋದ್ಯಮ ಇಲಾಖೆ ಮುಂಬೈನಲ್ಲಿ ಪ್ರಮುಖ ಕ್ರೂಸ್ ಸಂಸ್ಥೆಗಳೊಂದಿಗೆ ಸಭೆ ನಡೆಸಿತು. ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಪ್ರವಾಸೋದ್ಯಮ ಇಲಾಖೆ ಹಿರಿಯ ಅಧಿಕಾ-ರಿಗಳು ಮುಂಬೈನಲ್ಲಿ ಸಂಸ್ಥೆಯ ಅಧ್ಯಕ್ಷ ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜುರ್ಗನ್ ಬೈಲೋಮ್ ಹಾಗೂ ಪೋರ್ಟ್ ಆಪರೇಷನ್ಸ್ ನ ಅಸೋಸಿಯೇಟ್ ನಿರ್ದೇಶಕ ಭರತ್ ಆಚಾರ್ಯ ಅವರೊಂದಿಗೆ ಸುಧೀರ್ಘ ಚರ್ಚೆ ನಡೆಸಿದರು.

ಮಂಗಳೂರಿನಲ್ಲಿ ಕ್ರೂಸ್ ಸೇವೆ ಆರಂಭಿಸಲು ಅಗತ್ಯವಿರುವ ಮೂಲಸೌಕರ್ಯ, ಕಾರ್ಯಾಚರಣೆ, ಬಂದರು ಸೌಲಭ್ಯಗಳು, ಮಾರುಕಟ್ಟೆ ಅವಕಾಶಗಳು ಹಾಗೂ ಪ್ರವಾಸೋದ್ಯಮ ಅಭಿವೃದ್ಧಿಗೆ ಸಂಬಂಧಿಸಿದ ವಿವಿಧ ವಿಷಯಗಳ ಕುರಿತು ಸಮಗ್ರ ಚರ್ಚೆ ನಡೆಸಿದರು. ಮಂಗಳೂರು ಕರಾವಳಿ ಪ್ರದೇಶವು ದೇಶೀಯ ಹಾಗೂ ಅಂತರರಾಷ್ಟ್ರೀಯ ಪ್ರವಾಸಿಗರನ್ನು ಆಕರ್ಷಿಸುವ ಅಪಾರ ಸಾಮರ್ಥ್ಯ ಹೊಂದಿದೆ ಎಂದು ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು. ಕರಾವಳಿ ಪ್ರವಾಸೋದ್ಯಮಕ್ಕೆ ಹೊಸ ಆಯಾಮ ನೀಡಲು ಕ್ರೂಸ್ ಸೇವೆ ನೆರವಾಗಲಿದ್ದು, ಇದರಿಂದ ಪ್ರವಾಸೋದ್ಯಮ, ಆತಿಥ್ಯ ವಲಯ ಹಾಗೂ ಸ್ಥಳೀಯ ಉದ್ಯೋಗಾವಕಾಶಗಳಿಗೆ ಉತ್ತೇಜನ ದೊರೆಯುವ ನಿರೀಕ್ಷೆ ಇದೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ತಾಂತ್ರಿಕ ತಂಡ ಮುಂದಿನ ತಿಂಗಳು ಮಂಗಳೂರಿಗೆ ಭೇಟಿ ನೀಡಿ ಬಂದರು



ಸೌಲಭ್ಯಗಳು, ಪ್ರಯಾಣಿಕರ ನಿರ್ವಹಣಾ ವ್ಯವಸ್ಥೆ, ಕಾರ್ಯಾಚರಣೆಯ ಸಾಧ್ಯತೆ ಹಾಗೂ ಅಗತ್ಯ ಮೂಲಸೌಕರ್ಯಗಳ ಕುರಿತು ಸ್ಥಳ ಪರಿಶೀಲನೆ ನಡೆಸಲಿದೆ. ಈ ವರದಿಯ ಆಧ-ಾರದ ಮೇಲೆ ಮುಂದಿನ ಹಂತದ ಕ್ರಮಗಳನ್ನು ಕೈಗೊಳ್ಳಲಾಗುತ್ತದೆ. ಇದೇ ವೇಳೆ ರಾಜ್ಯದಲ್ಲಿ ಕ್ರೂಸ್ ಪ್ರವಾಸೋದ್ಯಮಕ್ಕೆ ಅಗತ್ಯವಾದ ಮೂಲಸೌಕರ್ಯ ಅಭಿವೃದ್ಧಿಪಡಿಸುವ ಉದ್ದೇಶದಿಂದ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳ ತಂಡ ಇತ್ತೀಚೆಗೆ ಮುಂಬೈನ ಅಂತರರಾಷ್ಟ್ರೀಯ ಕ್ರೂಸ್ ಟರ್ಮಿನಲ್‌ಗೆ ಭೇಟಿ ನೀಡಿ ಅಲ್ಲಿನ ಸೌಲಭ್ಯಗಳು, ಕಾರ್ಯಾಚರಣೆ ಹಾಗೂ ನಿರ್ವಹಣಾ ವ್ಯವಸ್ಥೆಯನ್ನು ಅಧ್ಯಯನ ಮಾಡಿದೆ. ಆ ಅಧ್ಯಯನದ ಆಧಾರದ ಮೇಲೆ ಮಂಗಳೂರಿನಲ್ಲಿ ಅಂತರರಾಷ್ಟ್ರೀಯ ಗುಣಮಟ್ಟದ ಕ್ರೂಸ್ ಟರ್ಮಿನಲ್ ನಿರ್ಮಾಣದ ಸಾಧ್ಯತೆ ಕುರಿತು ಪ್ರಾಥಮಿಕ ಕಾರ್ಯಸಾಧ್ಯತಾ ಅಧ್ಯಯನ ನಡೆಸಲು ಸೂಚಿಸಲಾಗಿದೆ.


## ವಿಷಾಹಾರ ಸೇವನೆ ಶಂಕೆ: 70ಕ್ಕೂ ಹೆಚ್ಚು ಕುರಿಗಳ ಸಾವು : ಚಿಕಿತ್ಸೆ ವಿಳಂಬಕ್ಕೆ ಕುರಿಗಾಹಿಗಳ ಆಕ್ರೋಶ..!

ಮುಂಡರಗಿ: ಗದಗ ಜಿಲ್ಲೆಯ ಮುಂಡರಗಿ ತಾಲೂಕಿನ ಕದಾಂಪುರ ಗ್ರಾಮದಲ್ಲಿ ವಿಷಯುಕ್ತ ಆಹಾರ ಸೇವಿಸಿರುವ ಶಂಕೆಯಿಂದ 70ಕ್ಕೂ ಹೆಚ್ಚು ಕುರಿಗಳು ಸಾವನ್ನಪ್ಪಿರುವ ಘಟನೆ ಶುಕ್ರವಾರ ಸಂಭವಿಸಿದೆ. ಈ ದುರ್ಘಟನೆಯಿಂದ ಕುರಿಗಾಹಿಗಳಲ್ಲಿ ಆತಂಕ ಮನೆ ಮಾಡಿದ್ದು, ಲಕ್ಷಾಂತರ ರೂಪಾಯಿ ನಷ್ಟ ಉಂಟಾಗಿದೆ.

ಕದಾಂಪುರ ಗ್ರಾಮದ ಕುರಿಗಾಹಿ ಶರಣಪ್ಪ ಗೋಡೆಕಾರ ಹಾಗೂ ಅವರ ಸಹೋದರರಿಗೆ ಸೇರಿದ ಸುಮಾರು 200ಕ್ಕೂ ಹೆಚ್ಚು ಕುರಿಗಳನ್ನು ಮೇಯಿಸಲು ಸಮೀಪದ ಬೆಂಡೆ ತೋಟಕ್ಕೆ ಕರೆದೊಯ್ಯಲಾಗಿತ್ತು. ಮೇಯುತ್ತಿದ್ದ ವೇಳೆ ಏಕಾಏಕಿ ಕೆಲವು ಕುರಿಗಳು ಅಸ್ವಸ್ಥಗೊಂಡು ನೆಲಕ್ಕುರುಳಲು ಆರಂಭಿಸಿವೆ. ಬಳಿಕ ಒಂದೊಂದಾಗಿ ದಾರಿಮಧ್ಯೆಯೇ ಸಾವನ್ನಪ್ಪಿದ್ದು, ಒಟ್ಟು 70ಕ್ಕೂ ಹೆಚ್ಚು ಕುರಿಗಳು ಮೃತಪಟ್ಟಿರುವುದಾಗಿ ತಿಳಿದುಬಂದಿದೆ.

ವಿಷಯ ತಿಳಿಯುತ್ತಿದ್ದಂತೆಯೇ ಕುರಿಗಾಹಿಗಳು ಪಶುವೈದ್ಯ ಇಲಾಖೆಯ ಅಧಿಕಾರಿಗಳಿಗೆ ಮಾಹಿತಿ ನೀಡಿದ್ದಾರೆ. ಆದ-ರೆ, ಸಮಯಕ್ಕೆ ಸರಿಯಾಗಿ ಔಷಧೋಪಚಾರ ಹಾಗೂ ಚಿಕಿತ್ಸೆ ದೊರೆಯದ ಕಾರಣ ಹೆಚ್ಚಿನ ಸಂಖ್ಯೆಯಲ್ಲಿ ಕುರಿಗಳು ಮೃತಪಟ್ಟಿವೆ ಎಂದು ಆರೋಪಿಸಿ ಪಶುವೈದ್ಯಾಧಿಕಾರಿಗಳ ವಿರುದ್ಧ ಕುರಿಗಾಹಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.





ತಾವು ಸಾಕುಪ್ರಾಣಿಗಳಂತೆ ಬೆಳೆಸಿದ್ದ ಕು-ರಿಗಳು ಕಣ್ಮುಂದೆಯೇ ಒಂದೊಂದಾಗಿ ಸಾವನ್ನಪ್ಪುತ್ತಿರುವ ದೃಶ್ಯ ಕಂಡು ಕುರಿಗಾಹಿ ಶರಣಪ್ಪ ಗೋಡೆಕಾರ ಹಾಗೂ ಅವರ ಕುಟುಂಬಸ್ಥರು ಕಣ್ಣೀರಿಟ್ಟರು. ಈ ದೃಶ್ಯ ಸ್ಥಳದಲ್ಲಿದ್ದವರ ಮನಕಲಕುವಂತಿತ್ತು.



ಘಟನಾ ಸ್ಥಳಕ್ಕೆ ಮುಂಡರಗಿ ತಹಶೀಲ್ದಾರ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾವಿಗೆ ನಿಖರ ಕಾರಣ ತಿಳಿಯಲು ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಮಾಹಿತಿ ಸಂಗ್ರಹಿಸುತ್ತಿದ್ದು, ವಿಷಾಹಾರ ಸೇವನೆಯೇ ಕಾರಣವೇ ಎಂಬ ಕುರಿತು ತನಿಖೆ ನಡೆಸಲಾಗುತ್ತಿದೆ.

ಘಟನೆಯಿಂದ ಕುರಿಗಾಹಿ ಕುಟುಂಬಕ್ಕೆ ಭಾರೀ ಆರ್ಥಿಕ ನಷ್ಟ ಉಂಟಾಗಿದ್ದು, ಸರ್ಕಾರ ತಕ್ಷಣ ಪರಿಹಾರ ಘೋಷಿಸಬೇಕು ಹಾಗೂ ಸಾವಿಗೆ ನಿಖರ ಕಾರಣ ಪತ್ತೆಹಚ್ಚಬೇಕು ಎಂದು ಸ್ಥಳೀಯರು ಹಾಗೂ ಕುರಿಗಾಹಿಗಳು ಆಗ್ರಹಿಸಿದ್ದಾರೆ.


## ಯಶವಂತಪುರ ರೈಲ್ವೆ ಓವರ್‌ಬ್ರಿಡ್ಜ್ ಕಾಮಗಾರಿ ಶೀಘ್ರ ಪೂರ್ಣಗೊಳಿಸಲು ಗಡುವು




ಬೆಂಗಳೂರು: ಯಶವಂತಪುರ ರೈಲ್ವೇ ಓವರ್‌ಬ್ರಿಡ್ಜ್ ಅಗಲೀಕರಣ ಕಾಮಗಾರಿಯನ್ನು ಎರಡು ತಿಂಗಳೊಳಗೆ ಪೂರ್ಣಗೊಳಿಸುವಂತೆ ಬೆಂಗಳೂರು ಪಶ್ಚಿಮ ನಗರ ಪಾಲಿಕೆ ಆಯುಕ್ತ ಡಾ. ರಾಜೇಂದ್ರ ಕೆ.ವಿ. ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಕಾಮಗಾರಿ ನಡೆಯುತ್ತಿರುವ ಪ್ರದೇಶವು ನಗರದ ಪ್ರಮುಖ ಭಾಗವಾಗಿರುವುದರಿಂದ ಸ್ವಚ್ಛತೆ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಸೂಚಿಸಿದರು. ಕಾಮಗಾರಿ ಸ್ಥಳದಲ್ಲಿ ಕಸ ಸುರಿಯದಂತೆ ಕ್ರಮ ಕೈಗೊಳ್ಳಬೇಕು, ಅನಧಿಕೃತ ವಾಹನ ನಿಲುಗಡೆ ತಡೆಯಲು ಬ್ಯಾರಿಕೇಡ್‌ಗಳನ್ನು ಅಳವಡಿಸಬೇಕು ಹಾಗೂ ಸಾರ್ವಜನಿಕರ ಸುರಕ್ಷತೆಗೆ ಅಗತ್ಯ ವ್ಯವಸ್ಥೆ ಕಲ್ಪಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ಅಪ್ರೋಚ್ ರಸ್ತೆ ನಿರ್ಮಾಣಕ್ಕೆ ಅಗತ್ಯವಿರುವ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವಂತೆ ಪಾಲಿಕೆ ಅಧಿಕಾರಿಗಳಿಗೆ ಸೂಚಿಸಿದ ಆಯುಕ್ತರು, ರೈಲ್ವೇ ಲೆವೆಲ್ ಕ್ರಾಸಿಂಗ್‌ನನ್ನೂ ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡಿದರು.ಪರಿಶೀಲನೆ ವೇಳೆ ರೈಲ್ವೇ ಅಧಿಕಾರಿಗಳು, ಮುಖ್ಯ ಅಭಿಯಂತರರು, ಗುತ್ತಿಗೆದಾರರು ಹಾಗೂ ಪಾಲಿಕೆಯ ಹಿರಿಯ ಎಂಜಿನಿಯರಿಂಗ್ ಅಧಿಕಾರಿಗಳು ಉಪಸ್ಥಿತರಿದ್ದರು. ಇದೇ ವೇಳೆ ಪಾಲಿಕೆ ಕಚೇರಿಯಲ್ಲಿ ಮಲ್ಲೇಶ್ವರ ಕ್ರೀಡಾ ಸಂಕೀರ್ಣದ ನಿರ್ವಹಣೆ ಕುರಿತು ಸಭೆಯೂ ನಡೆಯಿತು. ಆಯುಕ್ತ ಡಾ. ರಾಜೇಂದ್ರ ಕೆ.ವಿ. ಹಾಗೂ ಮಲ್ಲೇಶ್ವರ ಕ್ಷೇತ್ರದ ಶಾಸಕ ಡಾ. ಸಿ.ಎನ್. ಅಶ್ವತ್ಥ ನಾರಾಯಣ ಸಭೆಯಲ್ಲಿ ಪಾಲ್ಗೊಂಡು, ಕ್ರೀಡಾ ಸಂಕೀರ್ಣವನ್ನು ಸಮರ್ಥವಾಗಿ ನಿರ್ವಹಿಸಿ ಕ್ರೀಡಾಸಕ್ತರಿಗೆ ಉತ್ತಮ ಸೌಲಭ್ಯಗಳನ್ನು ಒದಗಿಸುವಂತೆ ಸೂಚಿಸಿದರು. ಕ್ರೀಡಾ ಸಂಕೀರ್ಣದ ನಿರ್ವಹಣೆಗೆ ಟೆಂಡರ್ ಪಡೆದಿರುವ ಮಿಶೆರ್ಘೋ ಸ್ಪೋರ್ಟ್?ಸ ಸಂಸ್ಥೆಯ ಪ್ರತಿನಿಧಿಗಳು ಕಾರ್ಯಯೋಜನೆಯನ್ನು ಸಭೆಯಲ್ಲಿ ಮಂಡಿಸಿದರು. ಸಭೆಯಲ್ಲಿ ಪಾಲಿಕೆಯ ಎಂಜಿನಿಯರಿಂಗ್ ಅಧಿಕಾರಿಗಳೂ ಭಾಗವಹಿಸಿದ್ದರು.

## ನಾಳೆಯಿಂದ ದುಬಾರಿ ದುನಿಯಾ : ಅಗತ್ಯ ವಸ್ತುಗಳು, ಉತ್ಪನ್ನಗಳ ಬೆಲೆಯಲ್ಲಿ ಭಾರಿ ಏರಿಕೆ



ಬೆಂಗಳೂರು: ನಾಳೆಯಿಂದ ದೇಶಾದ್ಯಂತ ಹಲವು ಅಗತ್ಯ ವಸ್ತುಗಳು ಮತ್ತು ಬಳಕೆದಾರ ಉತ್ಪನ್ನಗಳ ಬೆಲೆಯಲ್ಲಿ ಭಾರಿ ಏರಿಕೆಯಾಗಲಿದ್ದು, ಇದರ ನೇರ ಪರಿಣಾಮ ಮಧ್ಯಮ ವರ್ಗದ ಮೇಲೆ ಬೀಳಲಿದೆ. ಎಫ್‌ಎಂಸಿಜಿ ಉತ್ಪನ್ನಗಳಿಂದ ಹಿಡಿದು ಎಲೆಕ್ಟ್ರಾನಿಕ್ಸ್, ಸ್ಮಾರ್ಟ್‌ಫೋನ್ ಹಾಗೂ ಕಾರುಗಳವರೆಗೆ ಹಲವು ವಿಭಾಗಗಳಲ್ಲಿ ಕಂಪನಿಗಳು ಬೆಲೆ ಪರಿಷ್ಕರಣೆ ಮಾಡಲು ಮುಂದಾಗಿವೆ.

ದೈನಂದಿನ ಬಳಕೆಯ ಟೀ, ಸಾಬೂನು, ಹೇರ್ ಆಯಿಲ್, ಪ್ಯಾಕೇಜ್?ಡ ಆಹಾರ ಸೇರಿದಂತೆ ಎಫ್‌ಎಂಸಿಜಿ ಉತ್ಪನ್ನಗಳ ಬೆಲೆ ಶೇ.6ರಿಂದ 8ರಷ್ಟು ಏರಿಕೆಯಾಗುವ ಸಾಧ್ಯತೆ ಇದೆ. ಕಚ್ಚಾ ವಸ್ತುಗಳ ದರ, ಪಾಮ್ ಆಯಿಲ್ ಬೆಲೆ ಹಾಗೂ ಪ್ಯಾಕೇಜಿಂಗ್ ವೆಚ್ಚ ಹೆಚ್ಚಿರುವುದರಿಂದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಕಂಪನಿಗಳು ತಿಳಿಸಿವೆ. ಎಲೆಕ್ಟ್ರಾನಿಕ್?ಸ ಕ್ಷೇತ್ರದಲ್ಲಿಯೂ ರೆಫ್ರಿಜರೇಟರ್, ವಾಷಿಂಗ್ ಮೆಷಿನ್, ಟೆಲಿವಿಷನ್ ಸೇರಿದಂತೆ ಹಲವು ಉತ್ಪನ್ನಗಳ ಬೆಲೆ ಶೇ.4ರಿಂದ 6ರಷ್ಟು ಹೆಚ್ಚಾಗುವ ನಿರೀಕ್ಷೆಯಿದೆ. ಜಾಗತಿಕ ಮಾರುಕಟ್ಟೆಯಲ್ಲಿ ಕಚ್ಚಾ ವಸ್ತುಗಳ ಬೆಲೆ ಏರಿಕೆ ಹಾಗೂ ಉತ್ಪಾದನಾ ವೆಚ್ಚ ಹೆಚ್ಚಳ ಇದಕ್ಕೆ ಪ್ರಮುಖ ಕಾರಣವಾಗಿದೆ. ಸ್ಮಾರ್ಟ್‌ಫೋನ್‌ಗಳ ಬೆಲೆಯೂ ಹೆಚ್ಚಾಗುವ ಸಾಧ್ಯತೆ ಇದೆ. ಮೆಮೊರಿ ಚಿಪ್‌ಗಳ ಬೆಲೆ ಏರಿಕೆ ಮತ್ತು ಜಾಗತಿಕ ಪೂರೈಕೆ ಸರಪಳಿಯಲ್ಲಿನ ಸಮಸ್ಯೆಗಳು ಮೊಬೈಲ್ ಉತ್ಪಾದನಾ ವೆಚ್ಚವನ್ನು ಹೆಚ್ಚಿಸಿವೆ.ಆಟೋಮೊಬೈಲ್ ಕ್ಷೇತ್ರದಲ್ಲೂ ಹಲವು ಕಂಪನಿಗಳು ಬೆಲೆ ಪರಿಷ್ಕರಣೆ ಘೋಷಿಸಿವೆ. ಮಾರುತಿ ಸುಜುಕಿ ತನ್ನ ವಿವಿಧ ಕಾರು ಮಾದರಿಗಳ ಬೆಲೆಯನ್ನು 30 ಸಾವಿರದವರೆಗೆ ಹೆಚ್ಚಿಸಲು ನಿರ್ಧರಿಸಿದ್ದು, ಹೋಂಡಾ ಹಾಗೂ ಮರ್ಸಿಡಿಸ್ ಬೆನ್?ಜ ಕೂಡ ಬೆಲೆ ಏರಿಕೆ ಮಾಡುವ ಸಾಧ್ಯತೆ ಇದೆ. ಕಚ್ಚಾ ವಸ್ತುಗಳ ಬೆಲೆ ಹೆಚ್ಚಳ ಮತ್ತು ಉತ್ಪಾದನಾ ವೆಚ್ಚ ಏರಿಕೆ ಇದಕ್ಕೆ ಕಾರಣವಾಗಿದೆ. ಪಶ್ಚಿಮ ಏಷ್ಯಾದ ಭೌಗೋಳಿಕ ರಾಜಕೀಯ ಬಿಕ್ಕಟ್ಟು, ಕಚ್ಚಾ ತೈಲದ ಬೆಲೆ ಏರಿಕೆ, ಸಮುದ್ರ ಸಾರಿಗೆ ವೆಚ್ಚ ಹೆಚ್ಚಳ, ಜಾಗತಿಕ ಪೂರೈಕೆ ಸರಪಳಿಯ ಅಸ್ತವ್ಯಸ್ತತೆ ಹಾಗೂ ಡಾಲರ್ ಎದುರು ರೂಪಾಯಿ ಮೌಲ್ಯದ ಏರಿಳಿತವೂ ಬೆಲೆ ಏರಿಕೆಗೆ ಪ್ರಮುಖ ಕಾರಣಗಳಾಗಿವೆ.ಈಗಾಗಲೇ ಹಣದುಬ್ಬರದಿಂದ ಸಂಕಷ್ಟ ಎದುರಿಸುತ್ತಿರುವ ಸಾಮಾನ್ಯ ಜನರಿಗೆ ಈ ಬೆಲೆ ಏರಿಕೆ ಮತ್ತಷ್ಟು ಆರ್ಥಿಕ ಹೊರೆ ತರಲಿದ್ದು, ಕುಟುಂಬಗಳ ಮಾಸಿಕ ಖರ್ಚಿನ ಮೇಲೆ ಹೆಚ್ಚುವರಿ ಒತ್ತಡ ಉಂಟಾಗುವ ಸಾಧ್ಯತೆ ಇದೆ.

ಜನಶ್ರೀ ಟೈಮ್ಸ್
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಕಾವೇರಿ ಕಿಚ್ಚು : ಕೆಆರ್‌ಎಸ್ ಬಳಿ ಭಾರಿ ಪ್ರತಿಭಟನೆ, ಪೊಲೀಸರು ಫುಲ್ ಅಲರ್ಟ್



ಮಂಡ್ಯ: ಕಾವೇರಿ ಕಿಚ್ಚು ತೀವ್ರಗೊಂಡಿದ್ದು, ತಮಿಳುನಾಡಿಗೆ ನೀರು ಬಿಡುವಂತೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (ಸಿಡಬ್ಲ್ಯೂಎಂಎ) ನೀಡಿರುವ ನಿರ್ದೇಶನವನ್ನು ವಿರೋಧಿಸಿ ರಾಜ್ಯದ ರೈತ ಸಮುದಾಯ ಮತ್ತು ಕನ್ನಡ ಪರ ಸಂಘಟನೆಗಳು ಇಂದು ಕೆಆರ್‌ಎಸ್ ಜಲಾಶಯದ ಬಳಿ ಸಾಂಕೇತಿಕವಾಗಿ ಹುಲ್ಲು ತಿನ್ನುವ ಮೂಲಕ ಬೃಹತ್ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿವೆ.

15 ದಿನಗಳವರೆಗೆ ತಮಿಳುನಾಡಿಗೆ ಪ್ರತಿದಿನ 3,500 ಕ್ಯೂಸೆಕ್ ನೀರು ಬಿಡಬೇಕೆಂಬ ಕಾವೇರಿ ನೀರು ನಿಯಂತ್ರಣ ಸಮಿತಿಯ ಶಿಫಾರಸನ್ನು ಸಿಡಬ್ಲ್ಯೂಎಂಎ ಎತ್ತಿಹಿಡಿದಿದೆ. ಮಾನ್ಸೂನ್‌ನಲ್ಲಿ ಈ ಪ್ರದೇಶದಲ್ಲಿ ಕಡಿಮೆ ಮಳೆ ಮತ್ತು ರಾಜ್ಯದಲ್ಲಿ ಚಾಲ್ತಿಯಲ್ಲಿರುವ ತೀವ್ರ ಬರ ಪರಿಸ್ಥಿತಿಯ ಕರ್ನಾಟಕದ ವಾದವನ್ನು ಸಿಡಬ್ಲ್ಯೂಎಂಎ ಪರಿಗಣಿಸಲಿಲ್ಲ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಆ.2 ರಂದು ಸರ್ವಪಕ್ಷ ಸಭೆ ಕರೆದಿದ್ದಾರೆ. ಕನ್ನಡ ರಕ್ಷಣಾ ವೇದಿಕೆಯ ಸದಸ್ಯರು ಸೇರಿದಂತೆ ಪ್ರತಿಭಟನಾಕಾರರು ಜಲಾಶಯದ ಬಳಿ ಜಮಾಯಿಸಿದರು, ಕೆಲವು ಮಹಿಳಾ ಪ್ರತಿಭಟನಾಕಾರರು ಸಿಡಬ್ಲ್ಯೂಎಂಎ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯೂಆರ್‌ಸಿ) ಆದೇಶಗಳಿಗೆ ತಮ ವಿರೋಧವನ್ನು ವ್ಯಕ್ತಪಡಿಸಲು ಸಾಂಕೇತಿಕವಾಗಿ ಹುಲ್ಲು ತಿನ್ನುತ್ತಿದ್ದರು. ಪ್ರತಿಭಟನೆಯ ಸಂಕೇತವಾಗಿ ಮಹಿಳೆಯರು ಸೇರಿದಂತೆ ಕೆಲವು ಪ್ರತಿಭಟನಾಕಾರರು ರಸ್ತೆಯಲ್ಲಿ ಉರುಳಾಡುತ್ತಿರುವುದು ಕಂಡುಬಂದಿತು.

ತಮಿಳುನಾಡು ಮುಖ್ಯಮಂತ್ರಿ ಸಿ.ಜೋಸೆಫ್ ವಿಜಯ್ ಅವರ ಭಾವಚಿತ್ರವಿರುವ ಪೋಸ್ಟರ್‌ಗಳನ್ನು ಸಹ ಅವರು ಹಿಡಿದಿದ್ದರು. ಪೊಲೀಸರು ಪ್ರತಿಭಟನಾಕಾರರನ್ನು ಚದುರಿಸಿ ಹಲವರನ್ನು ಮುನ್ನೆಚ್ಚರಿಕಾ ಕ್ರಮವಾಗಿ ವಶಕ್ಕೆ ಪಡೆದರು. ಪ್ರಾಧಿಕಾರವು ನಮ ರೈತರಿಗೆ ಮರಣದಂಡನೆ ಶಿಕ್ಷೆಗೆ ಸಹಿ ಹಾಕಿದೆ. ಯಾವುದೇ ಸಂದರ್ಭದಲ್ಲೂ ಇದನ್ನು ಒಪ್ಪಿಕೊಳ್ಳಬಾರದು ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ಕರ್ನಾಟಕವು ಅನ್ಯಾಯಕ್ಕೆ ಪದೇ ಪದೇ ಒಳಗಾಗುತ್ತಿದೆ. ಸಂಕಷ್ಟ ಸಂದರ್ಭದಲ್ಲಿ ನಮಗೆ ಯಾವಾಗಲೂ ನ್ಯಾಯ ಸಿಗುತ್ತಿಲ್ಲ. ಹೋರಾಟ ಅನಿವಾರ್ಯವಾಗಿದೆ ಎಂದು ಪ್ರತಿಭಟನಾಕಾರರು ಹೇಳಿದರು.

ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ದೃಢವಾದ ನಿಲುವು ತೆಗೆದುಕೊಳ್ಳುವಂತೆ ಮನವಿ ಮಾಡಿದ ಪ್ರತಿಭಟನಾಕಾರರು, ಇಡೀ ಕನ್ನಡ ಸಮುದಾಯವು ನಿಮೊಂದಿಗೆ ನಿಂತಿದೆ. ನೀವು ಸರ್ವಪಕ್ಷ ಸಭೆ ಕರೆದಿದ್ದೀರಿ. ಜಾತಿ ಮತ್ತು ಧರ್ಮವನ್ನು ಮರೆತು ಎಲ್ಲಾ ಪಕ್ಷಗಳ ನಾಯಕರು ನಿಮೊಂದಿಗೆ ನಿಲ್ಲುತ್ತಾರೆ ಎಂದರು. ಯಾವುದೇ ಕಾರಣಕ್ಕೂ ಮುಖ್ಯಮಂತ್ರಿ ನೀರು ಬಿಡದಂತೆ ಪ್ರತಿಭಟನಾಕಾರರು ಒತ್ತಾಯಿಸಿದರು. ಕರ್ನಾಟಕದಿಂದ ನೀರು ಕೇಳುವ ಮೊದಲು ವಾಸ್ತವವನ್ನು ಅರ್ಥ ಮಾಡಿಕೊಳ್ಳಬೇಕೆಂದು ಅವರು ತಮಿಳುನಾಡು ಮುಖ್ಯಮಂತ್ರಿ ವಿಜಯ್ ಅವರಿಗೆ ಮನವಿ ಮಾಡಿದರು. ಬಲವಾದ ಕಾನೂನು ಹೋರಾಟ ಮಾಡಬೇಕು. ಸುಪ್ರೀಂ ಕೋರ್ಟ್ ಮುಂದೆ ಸೂಕ್ತ ಪ್ರಕರಣವನ್ನು ಮಂಡಿಸಬೇಕು ಎಂದು ಅವರು ಆಗ್ರಹಿಸಿದರು.

**ಪ್ರತಿಭಟನಾ ಸ್ಥಳಕ್ಕೆ ಬಿಎಸ್‌ವೈ :**

ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ಮತ್ತಿತರ ಬಿಜೆಪಿ ಮುಖಂಡರು ಭೇಟಿ ನೀಡುತ್ತಿರುವುದರಿಂದ ಪ್ರತಿಭಟನೆ ತೀವ್ರ ಸ್ವರೂಪ ಪಡೆದುಕೊಳ್ಳುತ್ತಿದೆ.


**ಭಾರೀ ಭದ್ರತೆ :**

ಪ್ರತಿಭಟನೆಗಳ ನಿರೀಕ್ಷೆಯಲ್ಲಿ ಜಿಲ್ಲೆಯಾದ್ಯಂತ ವ್ಯಾಪಕ ಭದ್ರತಾ ವ್ಯವಸ್ಥೆಗಳನ್ನು ಮಾಡಲಾಗಿದೆ ಎಂದು ಮಂಡ್ಯ ಪೊಲೀಸ್ ವರಿಷ್ಠಾಧಿಕಾರಿ ಶೋಭಾ ರಾಣಿ ವಿ.ಜೆ. ತಿಳಿಸಿದ್ದಾರೆ.

ಇಬ್ಬರು ಎಸ್‌ಪಿಗಳು, ಒಬ್ಬ ಹೆಚ್ಚುವರಿ ಎಸ್‌ಪಿ, ಒಂಬತ್ತು ಡಿವೈಎಸ್‌ಪಿಗಳು, 28 ಸರ್ಕಲ್ ಇನ್‌ಸ್ಪೆಕ್ಟರ್‌ಗಳು, 46 ಪಿಎಸ್‌ಐಗಳು ಮತ್ತು 59 ಎಎಸ್‌ಐಗಳನ್ನು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದರು.

ಕರ್ನಾಟಕ ರಾಜ್ಯ ಮೀಸಲು ಪೊಲೀಸ್ (ಕೆಎಸ್‌ಆರ್‌ಪಿ) ಯ 10 ಕಂಪನಿಗಳು ಮತ್ತು ಜಿಲ್ಲಾ ಸಶಸ್ತ್ರ ಮೀಸಲು ಪಡೆ (ಡಿಎಆರ್) ನ ಎಂಟು ಘಟಕಗಳನ್ನು ನಿಯೋಜಿಸಿದ್ದೇವೆ. ಒಟ್ಟಾರೆಯಾಗಿ, ಸುಮಾರು 1,500 ಸಿಬ್ಬಂದಿ ಕರ್ತವ್ಯದಲ್ಲಿದ್ದಾರೆ ಎಂದು ಅವರು ಹೇಳಿದರು. ಇತರ ಜಿಲ್ಲೆಗಳ ಸಿಬ್ಬಂದಿಯನ್ನು ಸಹ ನಿಯೋಜಿಸಲಾಗಿದೆ, ಸೂಕ್ಷ್ಮ ಸ್ಥಳಗಳಲ್ಲಿ ಬ್ಯಾರಿಕೇಡ್‌ಗಳನ್ನು ನಿರ್ಮಿಸಲಾಗಿದೆ ಮತ್ತು ಬೃಂದಾವನ ಉದ್ಯಾನವನಕ್ಕೆ ಸಾರ್ವಜನಿಕ ಪ್ರವೇಶವನ್ನು ದಿನಕ್ಕೆ ನಿಷೇಧಿಸಲಾಗಿದೆ ಎಂದು ಎಸ್‌ಪಿ ಹೇಳಿದರು.

# ಜಪಾನ್ ಭೂಕಂಪ : ಮೃತರ ಸಂಖ್ಯೆ 34ಕ್ಕೆ ಏರಿಕೆ




ಕುಮಾಮೊಟೊ: ನೈರುತ್ಯ ಜಪಾನ್‌ನಲ್ಲಿ ಸಂಭವಿಸಿದ ಪ್ರಬಲ ಭೂಕಂಪದಲ್ಲಿ ಸಾವನ್ನಪ್ಪಿದವರ ಸಂಖ್ಯೆ 34 ಕ್ಕೆ ಏರಿದ್ದು, ಮಾಲ್‌ನಲ್ಲಿ ಸ್ಫೋಟ ಸಂಭವಿಸಿದೆ. ಕಾರ್ಖಾನೆಯ ಚಿಮಣಿ ಉರುಳಿವೆ ಮತ್ತು ಮನೆಗಳು ನೆಲಸಮಗೊಂಡಿವೆ ಎಂದು ಕುಮಾಮೊಟೊ ಪ್ರಿಫೆಕ್ಚರಲ್ ಸರ್ಕಾರ ತಿಳಿಸಿದೆ.

ಜಪಾನ್‌ನ ದಕ್ಷಿಣ ಮುಖ್ಯ ದ್ವೀಪವಾದ ಕ್ಯುಶುದಲ್ಲಿ 7.1 ತೀವ್ರತೆಯ ಭೂಕಂಪ ಸಂಭವಿಸಿದೆ.ವಿಪತ್ತಿಗೆ ಸಂಬಂಧಿಸಿದಂತೆ 34 ಸಾವುಗಳು ದೃಢಪಟ್ಟಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ, ಇನ್ನೂ ಒಂದು ಸಾವು ಇನ್ನೂ ತನಿಖೆಯಲ್ಲಿದೆ. ಅಧಿಕಾರಿಗಳು 80 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ, ಅವರಲ್ಲಿ ಐದು ಜನರು ಗಂಭೀರವಾಗಿದ್ದಾರೆ ಎಂದು ಹೇಳಿದರು.

3,500 ಕ್ಕೂ ಹೆಚ್ಚು ಮನೆಗಳು ಇನ್ನೂ ವಿದ್ಯುತ್ ಸಂಪರ್ಕ ಕಡಿತಗೊಂಡಿವೆ ಮತ್ತು 9,000 ಕ್ಕೂ ಹೆಚ್ಚು ಜನರು ಆಶ್ರಯಗಳಲ್ಲಿ ವಾಸಿಸುತ್ತಿದ್ದಾರೆ, ಅಲ್ಲಿ ಹವಾನಿಯಂತ್ರಣವನ್ನು ಒದಗಿಸಲು ವಿದ್ಯುತ್ ಮೂಲಗಳನ್ನು ಸೇರಿಸಲಾಗುತ್ತಿದೆ. ಭೂಕಂಪದ ನಂತರದ ದಿನಗಳಲ್ಲಿ, ಬಿಸಿಲಿನ ಉಷ್ಣತೆ ಸೇರಿದಂತೆ ಅನಾರೋಗ್ಯದ ಬಗ್ಗೆ ಕಳವಳಗಳು ಹೆಚ್ಚಿವೆ. ಕಾಶಿಮಾ ಪಟ್ಟಣದ ಕುಸಿದ ಅಯೋನ್ ಮಾಲ್ ಶಾಪಿಂಗ್ ಸೆಂಟರ್ ಸ್ಥಳ ಸೇರಿದಂತೆ ಇಂದು ಕುಮಾಮೊಟೊ ಪ್ರದೇಶದಲ್ಲಿ ಶೋಧಕರು ಕೆಲಸ ಮುಂದುವರೆಸಿದರು, ಅಲ್ಲಿ ಕೆಲವು ಗಂಭೀರ ಹಾನಿ ದಾಖಲಾಗಿದೆ. ಭೂಕಂಪ ಸಂಭವಿಸಿದಾಗ ಸಂಕೀರ್ಣವು ಸಾವಿರಾರು ಜನರಿಂದ ತುಂಬಿತ್ತು.ಮಾಲ್‌ನ ಇನ್ನೊಂದು ಭಾಗದಲ್ಲಿ ಸ್ಫೋಟ ಸಂಭವಿಸುವ ಮೊದಲು ಸುಮಾರು 3,000 ಖರೀದಿದಾರರನ್ನು ಪಾರ್ಕಿಂಗ್ ಸ್ಥಳಕ್ಕೆ ಸ್ಥಳಾಂತರಿಸಲಾಯಿತು ಎಂದು ಕಂಪನಿ ತಿಳಿಸಿದೆ, ಅಲ್ಲಿ ಕೆಲವು ಸಿಬ್ಬಂದಿ ಕೆಲಸ ಮಾಡುತ್ತಿದ್ದರು. ಮಾಲ್‌ನ ಎರಡನೇ ಮಹಡಿ ಕುಸಿದು ಜನರು ಸಿಲುಕಿಕೊಂಡರು.

ಸ್ಥಳದಲ್ಲಿ, ಏಳು ಜನರು ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಲಾಗಿದೆ ಮತ್ತು 11 ಜನರನ್ನು ರಕ್ಷಿಸಲಾಗಿದೆ ಎಂದು ಜಪಾನ್‌ನ ಮುಖ್ಯ ಕ್ಯಾಬಿನೆಟ್ ಸೆಕ್ರೆಟರಿ ಮಿನೋರು ಕಿಹರಾ ಟೋಕಿಯೊದಲ್ಲಿ ವರದಿಗಾರರಿಗೆ ತಿಳಿಸಿದರು. ಇನ್ನೂ ಎಷ್ಟು ಜನರು ಕಾಣೆಯಾಗಿದ್ದಾರೆ ಎಂದು ಅಧಿಕಾರಿಗಳು ಹೇಳಲಿಲ್ಲ. ಏತನ್ಮಧ್ಯೆ, ಭೂಕಂಪದಲ್ಲಿ ಚಿಮಣಿ ಕುಸಿದು ಬಿದ್ದ ಯತ್ಸುಶಿರೋ ಪ್ರದೇಶದ ನಿಪ್ಪಾನ್ ಪೇಪರ್ ಇಂಡಸ್ಟ್ರೀಸ್ ಕಾರ್ಖಾನೆಯಲ್ಲಿ ಶೋಧ ಕಾರ್ಯಾಚರಣೆ ಕೊನೆಗೊಂಡಿದೆ ಎಂದು ಕಿಹರಾ ಹೇಳಿದರು. ಶೋಧಕರು ಅಲ್ಲಿ 11 ಜನರನ್ನು ರಕ್ಷಿಸಿದರು, ಆದರೆ ಒಂಬತ್ತು ಜನರು ಸಾವನ್ನಪ್ಪಿದ್ದಾರೆ ಎಂದು ದೃಢಪಡಿಸಲಾಯಿತು.

# ಇನ್ನೂ ಮುಗಿಯದ ಸಂಪುಟ ಸರ್ಕಸ್, ಇನ್ನೂ ರಾಜ್ಯ ನಾಯಕರ ಕೈಸೇರಿಲ್ಲ ಸಚಿವರ ಪಟ್ಟಿ



ಬೆಂಗಳೂರು: ರಾಜ್ಯ ನಾಯಕರ ನಡುವಿನ ಪೈಪೋಟಿಯಿಂದಾಗಿ ಸಚಿವ ಸಂಪುಟ ವಿಸ್ತರಣೆ ಕಾಂಗ್ರೆಸ್ ಹೈಕಮಾಂಡ್ ಗೆ ಕಬ್ಬಿಣದ ಕಡಲೆಯಾಗಿದ್ದು, ಸೋಮವಾರ ಮುಹೂರ್ತ ನಿಗದಿಯಾಗಿದ್ದರೂ, ಸಚಿವರ ಪಟ್ಟಿ ಇನ್ನೂ ರಾಜ್ಯ ನಾಯಕರ ಕೈ ಸೇರಿಲ್ಲ.

ಕಳೆದ ನಾಲ್ಕು ದಿನಗಳಿಂದ ಮುಖ್ಯಮಂತ್ರಿಯಾದಿಯಾಗಿ 70ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲೇ ಬೀಡು ಬಿಟ್ಟಿದ್ದರು. ನಿನ್ನೆ ಸಂಜೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸದಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್, ರಣದೀಪ್ ಸಿಂಗ್ ಸುರ್ಜೇವಾಲ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಸಭೆ ಸೇರಿ ಚರ್ಚೆ ನಡೆಸಿದ್ದರು. ಮೂಲಗಳ ಪ್ರಕಾರ ಸಭೆಯಲ್ಲಿ ಸಂಭವನೀಯ ಸಚಿವರ ಪೈಕಿ ಸುಮಾರು 16 ಹೆಸರುಗಳು ಅಖೈರುಗೊಂಡಿವೆ. ಚಿಕ್ಕಮಗಳೂ, ಬೆಂಗಳೂರು, ತುಮಕೂರು, ಕೋಲಾರ, ಬೆಳಗಾವಿ, ಮಂಡ್ಯ ಜಿಲ್ಲೆಯಿಂದ ಸಚಿವರನ್ನು ಆಯ್ಕೆ ಮಾಡಿಕೊಳ್ಳುವುದು ಕಾಂಗ್ರೆಸ್ ಹೈಕಮಾಂಡ್ ಗೆ ತಲೆ ನೋವಾಗಿದೆ. ಹೀಗಾಗಿ ದೆಹಲಿಯಿಂದ ರವಾನಿಸಿದ ಪಟ್ಟಿಯನ್ನು ಎಲ್ಲರೂ ಒಪ್ಪಿಕೊಳ್ಳಬೇಕು, ಯಾವುದೇ ರೀತಿಯ ಅಪಸ್ವರಗಳಿಗೆ ಅವಕಾಶ ನೀಡಬಾರದು ಎಂದು ಹೈಕಮಾಂಡ್ ಷರತ್ತು ವಿಧಿಸಿದೆ ಎಂದು ಮೂಲಗಳು ತಿಳಿಸಿವೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಅವರು ಜಾತಿ, ಧರ್ಮ ಆಧಾರಿತವಾಗಿ ಆದ್ಯತೆ ನೀಡಬೇಕು ಎಂದು ಪಟ್ಟು ಹಿಡಿದಿದ್ದರೆ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಹೊಸಬರಿಗೆ ಮತ್ತು ಪಕ್ಷ ನಿಷ್ಠರಿಗೆ ಮಣೆ ಹಾಕಬೇಕು ಎಂಬ ಧೋರಣೆಯಲ್ಲಿದ್ದಾರೆ. ನಿನ್ನೆ ಖರ್ಗೆ ಅವರ ನಿವಾಸದಲ್ಲಿ ನಡೆದ ಸಭೆಯ ಬಳಿಕ ರಾಜ್ಯ ನಾಯಕರ ಮುಖದಲ್ಲಿ ನಗು ಮಾಯವಾಗಿತ್ತು. ಎಲ್ಲರೂ ಬಿಗುವಿನಿಂದಲೇ ಹೊರ ನಡೆದಿದ್ದರು. ಹೈಕಮಾಂಡ್ ನ ಪ್ರತಿನಿಧಿಗಳು ಪ್ರತಿಕ್ರಿಯೆ ನೀಡಲು ನಿರಾಕರಿಸಿ, ಎಲ್ಲವನ್ನೂ ರಾಜ್ಯ ನಾಯಕರು ನೋಡಿಕೊಳ್ಳುತ್ತಾರೆ ಎಂದು ಹೇಳಿ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಯತ್ನ ನಡೆಸಿದರು. ಅಲ್ಲಿಗೆ ಸಂಪುಟ ವಿಸ್ತರಣೆಯ ಕಸರತ್ತು ಸುಲಲಿತವಾಗಿ ನಡೆದಿಲ್ಲ ಎಂಬ ಸಂದೇಶವಂತೂ ರವಾನೆಯಾಯಿತು. ಸಚಿವರ ಪಟ್ಟಿ ಅಖೈರುಗೊಂಡರೆ ತಕ್ಷಣವೇ ಪ್ರಮಾಣ ವಚನ ಬೋಧನಾ ಕಾರ್ಯಕ್ರಮ ಆಯೋಜಿಸುವುದಾಗಿ ಮುಖ್ಯಮಂತ್ರಿ ಹೇಳುತ್ತಿದ್ದರು. ಬಹುತೇಕ ಎಲ್ಲಾ ಶಾಸಕರು ಅದೇ ನಿರೀಕ್ಷೆಯಲ್ಲಿದ್ದರು. ಎಲ್ಲವೂ ಅಂದುಕೊಂಡತೆ ನಡೆದಿದ್ದರೆ ಇಂದು ಸಂಜೆ ಅಥವಾ ನಾಳೆ ಮಧ್ಯಾಹ್ನಾ ನೂತನ ಸಚಿವರು ಸಂಪುಟ ಸೇರಬೇಕಿತ್ತು. ಆದರೆ ಒಮತದ ಅಭಿಪ್ರಾಯಗಳು ಕೇಳಿ ಬರದ ಹಿನ್ನೆಲೆಯಲ್ಲಿ ಹೈಕಮಾಂಡ್ ವರಿಷ್ಠರು ಮತ್ತೊಮೆ ಪರಿಶೀಲನೆ ನಡೆಸಿ ಭಾನುವಾರ ಸಂಜೆ ಅಂತಿಮ ಪಟ್ಟಿ ರವಾನಿಸುವುದಾಗಿ ಹೇಳಿ ಕಳುಹಿಸಿದ್ದಾರೆ ಎನ್ನಲಾಗಿದೆ.

ನಾಲ್ಕು ದಿನಗಳ ಕಸರತ್ತಿನ ನಂತರವೂ ರಾಜ್ಯ ನಾಯಕರಿಗೆ ಸಚಿವ ಸಂಪುಟದ ಅಂತಿಮ ಪಟ್ಟಿಯನ್ನು ಜೊತೆಯಲ್ಲೇ ಬೆಂಗಳೂರಿಗೆ ತರಲು ಸಾಧ್ಯವಾಗದಿರುವುದು ಆಂತರಿಕ ಬೇಗುದಿಯ ಮುನ್ಸೂಚನೆ ನೀಡಿದೆ.ಪಕ್ಷ ನಿಷ್ಠರಿಗೆ, ವ್ಯಕ್ತಿಗತ ಪ್ರತಿಷ್ಠೆ ಹೆಚ್ಚಿಸಿಕೊಳ್ಳಲು ಕೆಲಸ ಮಾಡುವವರಿಗೆ, ನಾಯಕತ್ವದ ವಿರುದ್ಧ ಬೇಕಾಬಿಟ್ಟಿ ಮಾತನಾಡುವವರನ್ನು ಸಂಪುಟದಿಂದ ದೂರ ಇಡಬೇಕು ಎಂಬ ಷರತ್ತುಗಳನ್ನು ಹೈಕಮಾಂಡ್ ನಾಯಕರು ವಿಧಿಸಿದ್ದಾರೆ. ಮುಂದಿನ ಒಂದುವರೆ ವರ್ಷಗಳ ಬಳಿಕ ವಿಧಾನಸಭೆ ಚುನಾವಣೆಗೆ ತಯಾರಿ ನಡೆಸಬೇಕಿರುವುದರಿಂದ ಸಂಪನೂಲ ವ್ಯಕ್ತಿಗಳಿಗೆ ಆದ್ಯತೆ ನೀಡಬೇಕು. ಪಕ್ಷ ನಿಷ್ಠೆ, ಆರ್ಥಿಕ ಸದೃಢತೆ, ಕ್ರಿಯಾಶೀಲ ಶಾಸಕರನ್ನು ಸಂಪುಟಕ್ಕೆ ಸೇರಿಸಿಕೊಳ್ಳುವುದರಿಂದ ಮುಂದಿನ ಲೋಕಸಭೆ ಚುನಾವಣೆಯಲ್ಲೂ ಬಿಜೆಪಿ ವಿರುದ್ಧ ಪಬಲ ಹೋರಾಟ ನಡೆಸಲು ಸಾಧ್ಯವಾಗಲಿದೆ ಎಂದು ಡಿ.ಕೆ.ಶಿವಕುಮಾರ್ ಪ್ರತಿಪಾದಿಸಿದ್ದು, ಅದಕ್ಕನುಗುಣವಾಗಿ ಸಚಿವರ ಪಟ್ಟಿಯನ್ನು ಹೈಕಮಾಂಡ್‌ಗೆ ನೀಡಿದ್ದಾರೆ ಎನ್ನಲಾಗಿದೆ. ಸಿದ್ದರಾಮಯ್ಯ ಅವರು ಶೋಷಿತ ಅಹಿಂದ ವರ್ಗಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ವಲಸಿಗರು, ಮೂಲ ನಿವಾಸಿಗಳು ಎಂದು ಬೇಧ ಭಾವ ಮಾಡಬಾರದು. ತಮನ್ನು ನಂಬಿ ಬಂದವರಿಗೆ ಅನ್ಯಾಯವಾಗಲು ಬಿಡುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ. ಈ ಜಟಾಪಟಿ ವರಿಷ್ಠರಿಗೆ ತಲೆ ನೋವಾಗಿದೆ. ಕೆ.ಸಿ.ವೇಣುಗೋಪಾಲ್ ಅವರ ಜೊತೆ ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ಬಿ.ಕೆ.ಹರಿಪ್ರಸಾದ್ ಅವರು ಹಲವು ಸುತ್ತಿನವರೆಗೂ ಸಭೆ ನಡೆಸಿದ ಬಳಿಕವೂ ವಿಷಯ ಇತ್ಯರ್ಥ್ಯವಾಗದ ಹಿನ್ನೆಲೆಯಲ್ಲಿ ವರಿಷ್ಠರ ಸೂಚನೆ ಮೇರೆಗೆ ನಿನ್ನೆ ಮಧ್ಯಾಹ್ನ ಡಿ.ಕೆ.ಶಿವಕುಮಾರ್ ಕರ್ನಾಟಕ ಭವನಕ್ಕೆ ಭೇಟಿ ನೀಡಿ ಸಿದ್ದರಾಮಯ್ಯ ಅವರೊಂದಿಗೆ ಮಾತುಕತೆ ನಡೆಸಿದರು. ರಾಜ್ಯದ ಮೂವರು ಪ್ರಮುಖ ನಾಯಕರು ದೆಹಲಿಯಲ್ಲೇ ಇದ್ದರೂ, ಒಬ್ಬರಿಗೊಬ್ಬರು ಸಂಧಿಸಿ ಸೌಹಾರ್ದಯುತ ಚರ್ಚೆ ನಡೆಸುವ ಪ್ರಯತ್ನಗಳಾಗಲಿಲ್ಲ. ಎಲ್ಲವನ್ನೂ ಹೈಕಮಾಂಡ್ ಮುಂದಿಟ್ಟು ಇತ್ಯರ್ಥ್ಯ ಪಡಿಸಿಕೊಳ್ಳುವ ಧೋರಣೆಗೆ ಅಂಟಿಕೊಂಡರು. ಪರಿಸ್ಥಿತಿಯ ಗಂಭೀರತೆ ಅರಿತ ಹೈಕಮಾಂಡ್ ನಾಯಕರು ತಮದೇ ಆದ ಪಟ್ಟಿಯನ್ನು ಮುಂದಿಟ್ಟು ಸಚಿವ ಸಂಪುಟ ವಿಸ್ತರಣೆಯಲ್ಲಿ ಹಸ್ತಕ್ಷೇಪ ಮಾಡಿದೆ. ಸಂಪುಟ ರಚನೆ ಮುಖ್ಯಮಂತ್ರಿಯವರ ಪರಮಾಧಿಕಾರ ಎಂಬ ಹೇಳಿಕೆ ಪೇವಲಾಗುವಂತಹ ವಾತಾವರಣ ನಿರ್ಮಾಣವಾಗಿದೆ. ದೆಹಲಿಯಲ್ಲಿ ಬೀಡು ಬಿಟ್ಟಿದ್ದ ಕಾಂಗ್ರೆಸ್ ಶಾಸಕರು ಇಂದು ಮತ್ತು ನಿನ್ನೆ ರಾಜ್ಯಕ್ಕೆ ಮರಳಿದ್ದಾರೆ. ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಕೆಪಿಸಿಸಿ ಅಧ್ಯಕ್ಷರು ಸೇರಿ ಮೂರು ಸ್ಥಾನಗಳು ಹಳೆ ಮೈಸೂರು ಭಾಗಕ್ಕೆ ದೊರೆತಿರುವುದರಿಂದ, ಉತ್ತರ ಕರ್ನಾಟಕ ಭಾಗಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು. ಮೂವರು ಮಹಿಳೆಯರಿಗೆ ಮಣೆ ಹಾಕಬೇಕು ಎಂಬ ನಿರ್ಣಯಗಳಾಗಿರುವುದಾಗಿ ತಿಳಿಸಲಾಗಿದೆ.

**ಸಂಭವನೀಯರ ಪಟ್ಟಿ:**

ವಿಜಯಾನಂದ ಕಾಶಪ್ಪನವರ್, ಅಪ್ಪಾಜಿ ನಾಡಗೌಡ, ಯಶವಂತರಾಯಗೌಡ ಪಾಟೀಲ, ಹಂಪನಗೌಡ ಬಾದರ್ಲಿ, ಶಿವರಾಜ ತಂಗಡಗಿ, ರಾಘವೇಂದ್ರ ಹಿಟ್ನಾಳ್, ಹೆಚ್.ಕೆ.ಪಾಟೀಲ್, ಸಂತೋಷ್ ಲಾಡ್, ಶ್ರೀನಿವಾಸ ಮಾನೆ, ಬಸವರಾಜ ನೀಲಣ್ಣನವರ್, ಜೆ.ಎನ್.ಗಣೇಶ್, ಟಿ.ರಘುಮೂರ್ತಿ, ಡಿ.ಜಿ.ಶಾಂತನಗೌಡ, ಎ.ಎಸ್.ಪೊನ್ನಣ್ಣ, ಪ್ರದೀಪ್ ಈಶ್ವರ್, ಕೆ.ಎಂ.ಶಿವಲಿಂಗೇಗೌಡ ಸಂಪುಟ ಸೇರುವವರ ಪಟ್ಟಿಯಲ್ಲಿದ್ದಾರೆ. ಬೆಳಗಾವಿ ಜಿಲ್ಲೆಯಲ್ಲಿ ಗಣೇಶ್ ಹುಕ್ಕೇರಿ, ಲಕ್ಷ್ಮೀ ಹೆಬ್ಬಾಳ್ಕರ್, ಪಿ.ಎಂ.ಅಶೋಕ್, ಶಿವಾನಂದ ಕೌಜಲಗಿ ನಡುವೆ ಪೈಪೋಟಿಯಿದೆ. ತುಮಕೂರು ಜಿಲ್ಲೆಯಿಂದ ಟಿ.ಬಿ.ಜಯಚಂದ್ರ/ ಕೆ.ಷಡಾಕ್ಷರಿ, ಶಿವಮೊಗ್ಗ ಜಿಲ್ಲೆಯಲ್ಲಿ ಬಿ.ಕೆ.ಸಂಗಮೇಶ್ವರ್/ ಮಧು ಬಂಗಾರಪ್ಪ/ ಬೇಳೂರು ಗೋಪಾಲಕೃಷ್ಣ ನಡುವೆ ಸ್ಪರ್ಧೆಯಿದೆ. ಪ್ರಮುಖವಾಗಿ ಚಿಕ್ಕಮಗಳೂರು, ಕಲ್ಬುರ್ಗಿ ಜಿಲ್ಲೆಗಳಲ್ಲಿ ಆಕಾಕ್ಷಿಗಳ ನಡುವೆ ಭಾರೀ ಪೈಪೋಟಿ ಇದೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಟಿ.ಡಿ.ರಾಜೇಗೌಡ, ನಯನಾ ಮೋಟಮ್ಮ, ಆರತಿಕೃಷ್ಣ, ಕೆ.ಎಸ್.ಆನಂದ ಸಂಪುಟ ಸ್ಥಾನಕ್ಕಾಗಿ ಪಟ್ಟು ಹಿಡಿದಿದ್ದಾರೆ.

ಕಲ್ಬುರ್ಗಿ ಜಿಲ್ಲೆಯಲ್ಲಿ ಅಜಯ್ ಸಿಂಗ್/ ಕನೀಜ್ ಫಾತಿಮಾ ನಡುವೆ, ಕೋಲಾರ ಜಿಲ್ಲೆಯಲ್ಲಿ ಎಸ್.ಎನ್.ನಾರಾಯಣಸ್ವಾಮಿ/ ಕೆ.ವೈ.ನಂಜೇಗೌಡ, ಮಂಡ್ಯ ಜಿಲ್ಲೆಯಲ್ಲಿ ಚಲುವರಾಯಸ್ವಾಮಿ/ಪಿ.ಎಂ. ನರೇಂದ್ರ ಸ್ವಾಮಿ/ ರಮೇಶ್ ಬಂಡಿಸಿದ್ದನೇಗೌಡ ನಡುವೆ ಪೈಪೋಟಿಯಿದೆ. ವಿಧಾನ ಪರಿಷತ್ ಸದಸ್ಯರ ಪೈಕಿ ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್ ಸಂಪುಟ ಸೇರುವ ಸಾಧ್ಯತೆ ಇದೆ. ಸಲೀಂ ಅಹಮದ್ ಸಭಾಪತಿಯಾಗುವ ಸಾಧ್ಯತೆ ಇದೆ.

# ಜನರ ಸೇವೆಯಲ್ಲಿ ಸಾರ್ಥಕತೆ ಕಾಣುವ ಕನಸು

## ■ ಬಡವರ ದನಿಯಾಗುವ ಹಂಬಲ ■ ಸಮಾಜಮುಖಿ ಕೆಲಸ ಮಾಡಬೇಕೆನ್ನುವ ತುಡಿತ













### ವಕೀಲರು ಹಾಗೂ ಕೆಪಿಸಿಸಿ ರಾಜ್ಯ ಸಂಘಟನಾ ಕಾರ್ಯದರ್ಶಿ

# ಅರುಣಕುಮಾರ ಜೆ.ಮಜ್ಜಗಿ

ಉನ್ನತ ವ್ಯಾಸಂಗ ಮಾಡಿ ಕೈತುಂಬ ಸಂಬಳ ಪಡೆದು ಐಷಾರಾಮಿ ಜೀವನ ನಡೆಸಬೇಕು ಎಂದು ಕನಸು ಕಾಣುವ ಯುವಕರೆ ಇಂದಿನ ದಿನಗಳಲ್ಲಿ ಹೆಚ್ಚು. ಅದು ಎಲ್ಲ ಪೋಷಕರು ಆಸೆ ಕನಸು ಕೂಡಾ ಆಗಿರುತ್ತದೆ. ಅದನ್ನು ಎಲ್ಲರೂ ಒಪ್ಪಿಕೊಳ್ಳುವಂತಹ ವಾಸ್ತವ ಸತ್ಯ. ಆದರೆ, ಇಲ್ಲೊಬ್ಬ ಯುವಕ ಉನ್ನತ (ಎಲ್ ಎಲ್ ಬಿ) ಶಿಕ್ಷಣ ಪಡೆದರೂ ಸಮಾಜ ಸೇವೆ ಮಾಡಬೇಕು, ಜನರ ಮಧ್ಯೆಯಲ್ಲಿ ಜೀವನ ಕಂಡುಕೊಳ್ಳಬೇಕು. ಬಡವರ ದನಿಯಾಗಬೇಕು, ಸಮಾಜಮುಖಿಯಾಗಿ ಏನಾದರೂ ಮಾಡಬೇಕು ಎಂಬ ತುಡಿತದಿಂದ ವೃತ್ತಿಯ ಜತೆಗೆ ಪ್ರವೃತ್ತಿಗೂ ಹೆಚ್ಚು ಆದ್ಯತೆ ನೀಡಿ ಮುನ್ನಡೆಯುತ್ತಿದ್ದಾರೆ. ಜನರೊಂದಿಗೆ ಬೆರೆಯಬೇಕು. ಅವರ ಕಷ್ಟ ಕಾರ್ಪಣ್ಯಗಳನ್ನು ಅರಿಯಬೇಕು. ನೋವು ನಲಿವುಗಳಿಗೆ ಸ್ಪಂದಿಸಬೇಕು ಎಂಬ ಕಳಕಳಿಯುಳ್ಳ ಕನಸು ನಿಧಾನವಾಗಿ ಮೊಳಕೆಯೊಡೆದು ಗರಿ ಬಿಚ್ಚ ತೊಡಗಿದೆ.

ಕಳೆದ ಮೂರ್ನಾಲ್ಕು ವರ್ಷಗಳಿಂದ ತಮ್ಮ ಇತಿಮಿತಿಯೊಳಗೆ ಜನರ ಸೇವೆ ಮಾಡುತ್ತ ಸಾರ್ಥಕ ಅನುಭವ ಕಂಡುಕೊಂಡು ಕನಸು ಗುರಿ, ಹಂಬಲದೊಂದಿಗೆ ಒಂದೊಂದೇ ಹೆಜ್ಜೆ ಹಾಕತೊಡಗಿದ್ಧಾನೆ. ಪುತ್ರನ ಈ ಸಾಹಸಕ್ಕೆ ಪೋಷಕರು ಸಹ ಕೈಜೋಡಿಸಿ ಬೆಂಬಲಿಸಿ ಪ್ರೋತ್ಸಾಹಿಸಿ ನೀರೆರೆಯುತ್ತಿದ್ದಾರೆ. ಬೆಳೆಯುವ ಸಿರಿ ಮೊಳಕೆಯಲ್ಲೇ ಎಂಬಂತೆ ಈ ಮೊಳಕೆ ನವಲಗುಂದ ವಿಧಾನಸಭೆ ವ್ಯಾಪ್ತಿಯಲ್ಲಿ ನಿಸ್ವಾರ್ಥ ಸೇವೆ ಆರಂಭಿಸಿ ಜನಮಾನಸದಲ್ಲಿ ನೆಲೆಯೂರತೊಡಗಿದೆ. ಅವರು ಬೇರೆ ಯಾರೂ ಅಲ್ಲ, ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಮಟ್ಟದ ಸಂಘಟನಾ ಕಾರ್ಯದರ್ಶಿಯಾಗಿ ಅಭಿಮಾನ ಪೂರ್ವಕವಾಗಿ ಕಾರ್ಯನಿರ್ವಹಿಸುತ್ತಿರುವ ಹಾಗೂ ಅಖಿಲ ಕರ್ನಾಟಕ ಕುರುಬರ ಸಂಘದ ಧಾರವಾಡ ಜಿಲ್ಲೆಯ ಯುವ ಘಟಕದ ಜಿಲ್ಲಾಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ನವಲಗುಂದ ತಾಲೂಕಿನ ಶಲವಡಿ ಗ್ರಾಮದ ಅರುಣಕುಮಾರ ಜಂಬುನಾಥ ಮಜ್ಜಗಿ ಆ ಕನಸುಗಾರ ಯುವಕ.

ಪ್ರಾಥಮಿಕ, ಪ್ರೌಢ ಮತ್ತು ಪದವಿಪೂರ್ವ ಶಿಕ್ಷಣವನ್ನು ಗದಗ ನಗರದಲ್ಲಿ ಪೂರೈಸಿದ ಅರುಣಕುಮಾರ ಮಜ್ಜಗಿ, ಧಾರವಾಡ ಕಿಟೆಲ್ ಕಾಲೇಜಿನಲ್ಲಿ ಬಿಎಸ್ಸಿ ಪದವಿ ಮುಗಿಸಿದರು. ನಂತರ ಧಾರವಾಡದ ಸರ್ ಸಿದ್ದಪ್ಪ ಕಂಬಳಿ ಕಾನೂನು ಕಾಲೇಜಿನಲ್ಲಿ ಕಾನೂನು ಶಿಕ್ಷಣ ಪೂರೈಸಿ ಧಾರವಾಡ ಹೈಕೋರ್ಟ್ ಮತ್ತು ಸ್ಥಳೀಯ ಕೋರ್ಟ್ ನಲ್ಲಿ ವಕೀಲಿಕೆ ವೃತ್ತಿ ಆರಂಭಿಸಿದರು. ಸುಶಿಕ್ಷಿತ ಕುಟುಂಬದ ಅರುಣಕುಮಾರ ಅವರು ಸಮಾಜಸೇವೆ ಮಾಡಬೇಕೆಂಬ ಹಂಬಲ ವಿದ್ಯಾರ್ಥಿ ದೆಸೆಯಲ್ಲಿಯೇ ಚಿಗುರೊಡೆಯಿತು. ಶಿಕ್ಷಣ ಪೂರ್ಣಗೊಂಡ ನಂತರ ವೃತ್ತಿಯಷ್ಟೇ ಪ್ರವೃತ್ತಿಗೂ ಸಮಯ ನೀಡಿ ಕ್ಷೇತ್ರದಾದ್ಯಂತ ಸಂಚರಿಸಿ ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ಧಾರೆ. ಸ್ಥಳೀಯ ಜನಪ್ರಿಯ ಶಾಸಕ ಎನ್ ಎಚ್ ಕೋನರಡ್ಡಿ ಅವರ ಶಿಷ್ಯರಾಗಿ ಜನರ ಕಷ್ಟಗಳನ್ನು ಅರಿಯುವ, ಅಳಿಸುವ, ಸಮಾಧಾನಿಸುವ ಕಾರ್ಯ ಕಳೆದ ನಾಲ್ಕು ವರ್ಷಗಳಿಂದ ನಿರಂತರವಾಗಿದೆ.

ಸರ್ಕಾರಿ ಅಧಿಕಾರಿ ಪುತ್ರ ವಕೀಲ ಅರುಣಕುಮಾರ ಮಜ್ಜಗಿ ಅವರು ಸದ್ಯ ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರ ಆಗಿರುವ ಜಂಬುನಾಥ ಬಿ. ಮಜ್ಜಗಿ ಅವರ ಹಿರಿಯ ಪುತ್ರನಾಗಿದ್ದಾರೆ. ತಂದೆಯಂತೆ ಮಗನೂ ಅಧಿಕಾರಿ ಆಗಬಹುದಿತ್ತು. ಇಲ್ಲವೇ ದೊಡ್ಡ ವಕೀಲನಾಗಿ ಹಣ ಗಳಿಸುವ ಎಲ್ಲ ಪ್ರತಿಭೆ ಹಾಗೂ ಅವಕಾಶ ಇದ್ರೂ ಸಹ ಅದನ್ನು ಬದಿಗೊತ್ತಿ. ನಾನು ಜನರ ಸೇವೆ ಮಾಡುತ್ತೇನೆ ಎಂದು ನಿರ್ಧರಿಸುವುದು, ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತೇನೆ ಎಂದು ತೀರ್ಮಾನ ಮಾಡುವುದು ಅಷ್ಟೊಂದು ಸುಲಭವಲ್ಲ. ಐಷಾರಾಮಿ ಜೀವನ ಮಾಡಲು ಕಿಂಚಿತ್ತೂ ತೊಂದರೆ ಇಲ್ಲದಂತಹ ಅರುಣಕುಮಾರ ಅವರು ರಾಜಕೀಯ ಕ್ಷೆತ್ರವನ್ನು ಆಯ್ಕೆ ಮಾಡಿಕೊಂಡಿದ್ದಾರೆ. ರಾಜಕೀಯ ಹಿನ್ನಲೆ ಇಲ್ಲದ ಸರ್ಕಾರಿ ಸೇವೆಯಲ್ಲಿರುವ ಕುಟುಂಬದ ಈ ಕುಡಿ ಜನರ ಸೇವೆ ಮಾಡುತ್ತೇನೆ, ಅವ-ರಿಗಾಗಿ ಶ್ರಮಿಸುತ್ತೇನೆ ಎಂದು ದೃಢ ನಿರ್ಧಾರ ಮಾಡಿದ್ದು ಆರಂಭದಲ್ಲಿ ಕುಟುಂಬದಲ್ಲಿ ಕೊಂಚ ಹಿಂಜರಿಕೆ ಇತ್ತು.

ಆದರೆ, ನಿಧಾನವಾಗಿ ಪೋಷಕರು ಒಪ್ಪಿ ಬೆಂಬಲಿಸತೊಡಗಿದ್ದಾರೆ. ತಹಸೀಲ್ದಾರ ಜಂಬುನಾಥ ಮಜ್ಜಗಿ ಅವರ ಇನ್ನೊಬ್ಬ ಪುತ್ರ ಇಂಜಿನಿಯರಿಂಗ್ ಪದವಿ ಪೂರೈಸಿ ಕೇಂದ್ರ ಲೋಕಸೇವಾ ಆಯೋಗದ ಪರೀಕ್ಷೆಗಳಿಗೆ ತಯಾರಿ ನಡೆಸಿದ್ದಾರೆ. ಒಟ್ಟಾರೆ ಇದೊಂದು ಸುಶಿಕ್ಷಿತ ಕುಟುಂಬ ಇದಾಗಿದೆ.



ಶಲವಡಿ ಜಿಲ್ಲಾ ಪಂಚಾಯಿತಿ ಕ್ಷೇತ್ರ ವ್ಯಾಪ್ತಿಯ ಅರುಣಕುಮಾರ ಮಜ್ಜಗಿ ಅವರ ಪ್ರತಿ ವರ್ಷ ತಮ್ಮ ಜನ್ಮದಿನ ಆಗಷ್ಟ 1ರಂದು ಸರ್ಕಾರಿ ಶಾಲೆಯ ಎಲ್ಲ ಮಕ್ಕಳಿಗೂ ಪೆನ್, ನೋಟ್ ಬುಕ್ ವಿತರಣೆ ಮಾಡುವ ಕಾರ್ಯವನ್ನು ರೂಢಿಸಿಕೊಂಡು ಬಂದಿದ್ದಾರೆ. ಇಲ್ಲಿಯವರೆಗೆ ಸಾವಿರಾರು ಮಕ್ಕಳಿಗೆ ಪೆನ್ ನೋಟ್ ಬುಕ್ ವಿತರಿಸಿ ಖುಷಿಪಟ್ಟಿದ್ದಾರೆ. ಮೊಹರಂ ಹಬ್ಬದ ಸಮಯದಲ್ಲಿ ಟೀಶರ್ಟ್ ವಿತರಣೆ ಮಾಡಿದ್ದಾರೆ. ಆರೋಗ್ಯ ಶಿಬಿರ ಏರ್ಪಡಿಸಿ ಸಮಾಜದ ಆರೋಗ್ಯ ಸ್ವಾಸ್ಥ್ಯವನ್ನೂ ಕಾಪಾಡಿದ್ದಾರೆ.

ಬಡಮಕ್ಕಳಿಗೆ ಸ್ಕಾಲರ್ ಶಿಪ್ (ಶಿಷ್ಯವೇತನ) ನೀಡಿ ಹಲವು ಬಡ ಮಕ್ಕಳ ಶಿಕ್ಷಣಕ್ಕೆ ದಾರಿ ಮಾಡಿಕೊಟ್ಟಿದ್ದಾರೆ. ಟಗರಿನ ಕಾಳಗ ಸೇರಿ ಇತರೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಿ ಜನರಿಂದ ಸೈ ಎನಿಸಿಕೊಂಡಿದ್ದಾರೆ.

ಶಲವಡಿ ಗ್ರಾಮದಲ್ಲಿ ಆಯೋಜಿಸಿದ್ದ ಕಲಬುರಗಿಯ ಶ್ರೀ ಶರಣಬಸವೇಶ್ವರ ಪುರಾಣದಲ್ಲಿ ಭಕ್ತರ ಕೋರಿಕೆ ಮೇರೆಗೆ ಎತ್ತುಗಳನ್ನು ದಾನವಾಗಿ ಕೊಡಿಸಿ ದೇವರ ಆಶೀರ್ವಾದಕ್ಕೆ ಪಾತ್ರರಾಗಿದ್ದಾರೆ. ದಿನವೀಡಿ ಸಮಾಜ ಸೇವೆ ಮುಂದುವರಿದಿದೆ. ಕ್ಷೇತ್ರದ ಜನರಿಗೆ ಸಹಾಯ ಸಹಕಾರ ನಿತ್ಯ ನಿರಂತರವಾಗಿ ಮುಂದುವರಿದಿದೆ.

ಶಲವಡಿ ಜಿಲ್ಲಾ ಪಂಚಾಯಿತಿ ಕ್ಷೇತ್ರ ವ್ಯಾಪ್ತಿಯ ಶಲವಡಿ, ತುಪ್ಪದ ಕುರಹಟ್ಟಿ, ಕಿತ್ತೂರು, ನಾವಳ್ಳಿ, ಅಡ್ನೂರು, ಹಳ್ಳಿಕೇರಿ, ಇಬ್ರಾಹಿಂಪುರ ಸೇರಿ ಏಳು ಗ್ರಾಮಗಳಲ್ಲಿ ಸಾಮಾಜಿಕ ಕಾರ್ಯಗಳು ಮುಂದುರಿಸಿಕೊಂಡು ಹೋಗುತ್ತಿದ್ದಾರೆ. ಅಲ್ಲದೇ, ಜನರ ಸಣ್ಣ ಪುಟ್ಟ ಸಮಸ್ಯೆಗಳನ್ನು ಪರಿಹರಿಸಿ ಅವರ ಮುಖದಲ್ಲಿ ಸಂತೃಪ್ತಿ ಭಾವ ಕಾಣುತ್ತಿದ್ದಾರೆ. ಒಟ್ಟಾರೆ ಜಿಪಂ ಕ್ಷೇತ್ರ ವ್ಯಾಪ್ತಿಯಲ್ಲಿ ನಮ್ಮ ಮನೆಯ ಹುಡುಗ ಎಂಬ ಪ್ರೀತಿ ವಿಶ್ವಾಸಕ್ಕೆ ಅರುಣಕುಮಾರ ಪಾತ್ರರಾಗಿದ್ದಾರೆ ಎಂದು ಕ್ಷೇತ್ರದ ಜನರು ಮಾತನಾಡುವಂತಾಗಿದೆ.

**ಜನ್ಮದಿನದ ವಿಶೇಷ**

ಅಷ್ಟರ ಮಟ್ಟಿಗೆ ಚಿಕ್ಕ ವಯಸ್ಸಿನಲ್ಲಿ ಜನರ ಮನಸ್ಸಿನಲ್ಲಿ ಬೇರೂರುವಂತಹ ನಿಟ್ಟಿನಲ್ಲಿ ಹೆಜ್ಜೆ ಇರಿಸಿದ್ದು ಪ್ಲಸ್ ಪಾಯಿಂಟ್, ಅಲ್ಲದೇ, ನಾಲ್ಕು ವರ್ಷ ಈ ಸಮಾಜ ಸೇವೆ ಅವಧಿಯಲ್ಲೀ ಅರುಣಕುಮಾರ ಕಿಂಚಿತ್ತೂ ಹೆಸರು ಕೆಡಿಸಿಕೊಂಡವರಲ್ಲ. ಕೈ ಬಾಯಿ ಶುದ್ಧವಾಗಿಟ್ಟುಕೊಂಡು ನಿಸ್ವಾರ್ಥದಿಂದ ಸದ್ದಿಲ್ಲದೇ ಸೇವೆ ಮಾಡುತ್ತಿರುವ ಈ ಯುವನಾಯಕನಿಗೆ ಭವಿಷ್ಯ ಕಟ್ಟಿಕೊಡಲು ಕ್ಷೇತ್ರದ ಜನರು ಟೊಂಕ ಕಟ್ಟಿ ನಿಂತಿದ್ದಾರೆ. ಪರಿಶುದ್ಧ ಮನಸ್ಸಿನ, ಸುಶಿಕ್ಷಿತ ಕುಟುಂಬದ, ವಿದ್ಯಾವಂತನಿಗೆ ಒಂದು ಸಲ ಅವಕಾಶ ನೀಡಬಾರದೇಕೆ ಎಂಬ ಆಸೆ ಆಶಯ ಶಲವಡಿ ಜಿಪಂ ಕ್ಷೇತ್ರದ ಜನರಲ್ಲಿ ಹುಟ್ಟಿದೆ.

ಅರುಣಕುಮಾರ ಅವರ ಸರಳತೆ, ಹಣದ ಆಸೆ ಆಮಿಷಕ್ಕೆ ಒಳಗಾಗದ ಅವರ ಕೆಲಸ ಕಾರ್ಯಗಳ ಜತೆಗೆ ಇವರ ತಂದೆ ಜಂಬುನಾಥ ಮಜ್ಜಗಿ ಅವರು ಕಳೆದ 30 ವರ್ಷಗಳಿಂದ ಸರ್ಕಾರಿ ಸೇವೆಯಲ್ಲಿದ್ದಾರೆ. ಅವರು ಸಹ ತಮ್ಮ ಸೇವಾವಧಿಯಲ್ಲಿ ನೂರಾರು ಸಾವಿರಾರು ಜನರಿಗೆ ಒಂದಿಲ್ಲ ಒಂದು ಅನುಕೂಲತೆ ಮಾಡಿಕೊಟ್ಟು ಸಾರ್ಥಕತೆಯನ್ನೂ ಮೆರೆದಿದ್ದಾರೆ. ಸರ್ಕಾರಿ ಸೇವೆಯಲ್ಲಿ ತಂದೆ ಮತ್ತು ಸಾಮಾಜಿಕ ಸೇವೆಯಲ್ಲಿ ಮಗನ ಕ್ರಿಯಾಶೀಲ ಕಾರ್ಯಗಳನ್ನು ಕಂಡಿರುವ ಕ್ಷೆತ್ರದ ಜನರು ಒಂದು ಸಲ ನಮ್ಮ ಹುಡುಗನಗೊಂದು ಅವಕಾಶ ಏತಕ್ಕಾಗಿ ನೀಡಬಾರದು ಎಂಬ ಮಾತುಗಳು, ಚರ್ಚೆಗಳು ದಂಡಿಯಾಗಿವೆ.




















"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com